# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 123 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 30–11–2024 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 123 | RNI No: KARKAN/2023/88462 | Chitradurga | Date: 30-11-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಹಿಳಾ ನೌಕರರ ಮೇಲಿನ ದೌರ್ಜನ್ಯ ಮೂಲಭೂತ ಹಕ್ಕಿನ ಉಲ್ಲಂಘನೆ 2

ಮಾತು ಮತ್ತು ಆಲೋಚನೆಗಳು ಜಗತ್ತನ್ನು ಆಳುತ್ತವೆ: ಕೆ.ಕೆ.ಮಣಿ 3

ಸಿಎಂ ಬದಲಾವಣೆ ಕಾಂಗ್ರೆಸ್‌ಗೆ ಅನಿವಾರ್ಯ: ಕಾರಜೋಳ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನ.30 ಮತ್ತು ಡಿ.2,4,6 ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ಪಂಡರಹಳ್ಳಿ ವಿದ್ಯುತ್ ವಿತರಣಾ ಕೇಂದ್ರದ ಆವರಣದಲ್ಲಿ ಬೃಹತ್ 66ಕೆ.ವಿ ಗೋಪುರ ನಿರ್ಮಾಣ ಹಮ್ಮಿಕೊಂಡಿರುವುದರಿಂದ ನ.30 ಹಾಗೂ ಡಿ.2, 4 ಮತ್ತು 6ರಂದು ಪಂಡರಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎನ್.ಜೆ.ವೈ ಮತ್ತು ಐ.ಪಿ ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ದ್ಯುತ್ ಅಡಚಣೆಯಾಗುವ ಪ್ರದೇಶಗಳು: 66/11 ಕೆವಿ ಪಂಡರಹಳ್ಳಿ ವಿವಿ ಕೇಂದ್ರದಿಂದ ಸರಬರಾಜಾಗುವ 11ಕೆವಿ ಮಾರ್ಗದ ಅನ್ನೇಹಾಳ್, ಹುಲ್ಲೂರು ಎನ್.ಜೆ.ವೈ, ಪಂಡರಹಳ್ಳಿ ಕಾವಲಹಟ್ಟಿ, ಕುರುಬರಹಳ್ಳಿ, ಎಫ್–10 ಬೆಟ್ಟದನಾಗೇನಹಳ್ಳಿ, ಸಿಂಗಾಪುರ, ಕಕ್ಕೇರು ಎನ್.ಜೆ.ವೈ ಸರಬರಾಜು ಕೇಂದ್ರಕ್ಕೆ ಹೊಂದಿಕೊಂಡಿರುವ ಅನ್ನೇಹಾಳ್, ಹುಲ್ಲೂರು, ಪಂಡರಹಳ್ಳಿ ಕಾವಲಹಟ್ಟಿ, ಮಹದೇವನಹಟ್ಟಿ, ಗೊಡಬನಾಳ್, ಸೊಂಡೆಕೊಳ, ಕುರುಬರಹಳ್ಳಿ, ಬೆಟ್ಟದನಾಗೇನಹಳ್ಳಿ, ಸಿಂಗಾಪುರ ಹಾಗೂ ಕಕ್ಕೇರು ಗ್ರಾಮಗಳು ಮತ್ತು ಐ.ಪಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಿಡಿಓ ಅಮಾನತು

» ಚಿತ್ರದುರ್ಗ

ಅನಧಿಕೃತ ಗೈರು ಹಾಜರಿ ಹಾಗೂ ಕರ್ತವ್ಯದ ವೇಳೆ ಮದ್ಯಪಾನ ಸೇವಿಸಿದ ಹಿನ್ನಲೆಯಲ್ಲಿ ಚಳ್ಳಕೆರೆ ತಾಲ್ಲೂಕು ಗೌಡಗೆರೆ ಗ್ರಾ.ಪಂ. ಪಿಡಿಓ ವೆಂಕಟೇಶ್ ಅವರನ್ನು ಅಮಾನತುಗೊಳಿಸಿ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಆದೇಶಿಸಿದ್ದಾರೆ.

ಚಳ್ಳಕೆರೆ ತಾ.ಪಂ.ಇಓ ಪಿಡಿಓ ವೆಂಕಟೇಶ್ ಅವರ ಮೇಲೆ ಕೇಳಿ ಬಂದ ದೂರುಗಳನ್ನು ಪರಿಶೀಲಿಸಿ, ಶಿಸ್ತು ಕ್ರಮ ಕೈಗೊಳ್ಳುವಂತೆ ಅವರಿಗೆ ವರದಿ ನೀಡಿದ್ದರು. ಈ ಹಿನ್ನಲೆಯಲ್ಲಿ ಕೆ.ಸಿ.ಎಸ್(ಸಿ.ಸಿ.ಎ) ನಿಯಾಮಾವಳಿ–1957ರ ನಿಯಮ 10(1)ರ ಅನ್ವಯ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಪಿಡಿಓ ವೆಂಕಟೇಶ ಅವರನ್ನು ಅಮಾನುತು ಮಾಡಿದ್ದಾರೆ. ಗೌಡಗೆರೆ ಗ್ರಾ.ಪಂ.ಗೆ ನನ್ನಿವಾಳ ಗ್ರಾ.ಪಂ.ಕಾರ್ಯದರ್ಶಿ ಆರ್.ಪಿ.ವೇದಮೂರ್ತಿಯವರನ್ನು ಹೆಚ್ಚುವರಿ ಪಿಡಿಓ ಆಗಿ ನೇಮಕ ಮಾಡಲಾಗಿದೆ.

### ಹೊಸೂರುತಾಂಡಬಳಿ ಅಕ್ರಮ ಮರಳು ಸಾಗಾಟ ಮಾಡುತ್ತಿದ್ದ ಟ್ರ್ಯಾಕ್ಟರ್ ವಶ

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ಹೊಸೂರುತಾಂಡದ ಬಳಿ ಅನುಮತಿ ಇಲ್ಲದೆ ಅಕ್ರಮವಾಗಿ ಟ್ರ್ಯಾಕ್ಟರ್‌ನಲ್ಲಿ ಮರಳು ಸಾಗಿಸುತ್ತಿದ್ದ ಟ್ರ್ಯಾಕ್ಟರ್ ಚಾಲಕ ಬೋರಣ್ಣನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಪಿಎಸ್‌ಐಧರೆಪ್ಪಬಾಳಪ್ಪದೊಡ್ಡಮನಿ ಸಾರ್ವಜನಿಕರ ಮಾಹಿತಿ ಮೇರೆಗೆ ಪೊಲೀಸ್ ಇಲಾಖೆ ಸಿಬ್ಬಂದಿ ವರ್ಗ ಹೊಸೂರುತಾಂಡದ ಬಳಿ ಚಲಿಸುತ್ತಿದ್ದ ಟ್ರ್ಯಾಕ್ಟರ್ ನಿಲ್ಲಿಸಿ ಪರಿಶೀಲಿಸಿದಾಗ ಟ್ರ್ಯಾಕ್ಟರ್‌ನಲ್ಲಿ ಅಕ್ರಮ ಮರಳು ಸಾಗಿಸುತ್ತಿದ್ದು, ಕಂಡುಬಂದಿದೆ. ಕೂಡಲೇ ಚಾಲಕನ ಸಹಿತ ಮರಳನ್ನು ವಶಪಡಿಸಿಕೊಂಡಿದ್ದಾರೆ.

### ಮಾದಕ ವಸ್ತುವಿನ ನಿಯಂತ್ರಣ; ಶಿಕ್ಷಕರಿಗೆ ಒಂದು ದಿನದ ಜಾಗೃತಿ

» ದಾವಣಗೆರೆ

ರಾಜ್ಯ ಮಟ್ಟದ ಸಮನ್ವಯ ಸಂಸ್ಥೆ, ಕರ್ನಾಟಕ ನಶಾ ಮುಕ್ತ ಭಾರತ ಅಭಿಯಾನ ಇವರ ಸಂಯುಕ್ತಾಶ್ರಯದಲ್ಲಿ ದೊಡ್ಡಬಾತಿ ತಪೋವನ ಕೇಂದ್ರ ಕಚೇರಿಯಲ್ಲಿ ಶಾಲಾ ಶಿಕ್ಷಕರಿಗೆ ಮಾದಕ ವಸ್ತುವಿನ ನಿಯಂತ್ರಣ ಕುರಿತು ಒಂದು ದಿನದ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ತಪೋವನ ಅಯುರ್ವೇದಿಕ್ ಮತ್ತು ನ್ಯಾಚುರೋಪತಿ ಕಾಲೇಜ್ ಮತ್ತು ಆಸ್ಪತ್ರೆಯ ಪ್ರಿನ್ಸಿಪಾಲರಾದ ಡಾ.ಅಶ್ವಿನಿ ಉದ್ಘಾಟನೆ ಮಾಡಿದರು. ರಾಜ್ಯ ಮಟ್ಟದ ಎಸ್.ಎಲ್.ಸಿ.ಎ ಸಂಯೋಜಕರಾದ ಶೈಲಾಶ್ರೀ ಮಾದಕ ವಸ್ತುಗಳ ಅಪಾಯ ಮತ್ತು ನಿಯಂತ್ರಣ ಕುರಿತು ಮಾಹಿತಿ ನೀಡಿದರು. ಶಿಕ್ಷಣ ಇಲಾಖೆಯ ಶಿಕ್ಷಕರ ವಿಜಯ ಕುಮಾರ್ ಮತ್ತು ಮಹಮ್ಮದ್ ಹುಸೇನ್ ಪೀರ್ ರವರು ಪ್ರತಿಜ್ಞಾ ವಿಧಿ ಬೋಧಿಸಿದರು.

# ಹೊಳಲ್ಕೆರೆ ಪುರಸಭೆಗೆ ವಿಜಯಸಿಂಹ ಖಾಟ್ರೋತ್ ಅಧ್ಯಕ್ಷ, ನಾಗರತ್ನ ವೇದಮೂರ್ತಿ ಉಪಾಧ್ಯಕ್ಷೆ

» ಹೊಳಲ್ಕೆರೆ



ಪುರಸಭೆ ಅಧ್ಯಕ್ಷ ರಾಗಿ ವಿಜಯಸಿಂಹ ಖಾಟ್ರೋತ್, ಉಪಾಧ್ಯಕ್ಷರಾಗಿ ಹೆಚ್.ಆರ್.ನಾಗರತ್ನ ವೇದಮೂರ್ತಿ ಶುಕ್ರವಾರ ನಡೆದ ಪುರಸಭೆಯ ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಚುನಾವಣೆ ಬಳಿಕ ತಹಸೀಲ್ದಾರ್ ಬಿಬಿ ಫಾತಿಮಾ ಅಧ್ಯಕ್ಷ ಉಪಾಧ್ಯಕ್ಷರ ಅವಿರೋಧ ಆಯ್ಕೆ ಘೋಷಿಸಿದರು.

ಈ ಮೊದಲು ಇದ್ದ ಪಟ್ಟಣ ಪಂಚಾಯಿತಿಯನ್ನ ಪುರಸಭೆಯಾಗಿ ಮೇಲ್ದರ್ಜೆಗೇರಿದ ಬಳಿಕ ನಡೆದ ಮೊದಲ ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಎಸ್ಸಿ ಮೀಸಲು ಅಧ್ಯಕ್ಷ ಸ್ಥಾನಕ್ಕೆ ವಿಜಯಸಿಂಹ ಖಾಟ್ರೋತ್ ಅವಿರೋಧ ಆಯ್ಕೆ ಮಾಡುವ ತಿರ್ಮಾನದ ಬಳಿಕ ಸಾಮಾನ್ಯ ಮಹಿಳೆ ಮೀಸಲಿನಿಂದ .ಎಚ್ .ಆರ್ ನಾಗರತ್ನ ವೇದಮೂರ್ತಿ ಇವರು ಅಯ್ಕೆಯಾಗಲು ಮಾಜಿ ಸಚಿವ ಹೆಚ್.ಆಂಜನೇಯ, ಸದಸ್ಯರ ನಡುವೆ ಸಾಮರಸ್ಯ ಮೂಡಿಸಿ ಎರಡು ಜನರ ಅವಿರೋಧ ಆಯ್ಕೆಗೆ ಶ್ರಮಿಸಿದರು.

ಒಟ್ಟಾರೆಯಾಗಿ ಹೇಳುವುದಾದರೆ ಕಾಂಗ್ರೆಸ್ ಬಿಜೆಪಿ ಪಕ್ಷೇತರರ ಮತ್ತು ಸಂಸದರ ಹಾಗೂ ಸರ್ವ ಸದಸ್ಯರ ಬೆಂಬಲದೊಂದಿಗೆ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನವು ಅವಿರೋಧ ಆಯ್ಕೆಯಾಗಿದೆ.

ಅಧ್ಯಕ್ಷ ಸ್ಥಾನಕ್ಕೆ ಈ ಮೊದಲು ಆಕಾಂಕ್ಷಿಯಾಗಿದ್ದ ವಸಂತರಾಜ್ ಹಾಗೂ ವಿಜಯ್ ಸಿಂಹ ಖಾಟ್ರೋತ್ ನಡುವೆ ಸಂಧಾನ ಏರ್ಪಡಿಸಿದ ಮಾಜಿ ಸಚಿವ ಹೆಚ್ ಆಂಜನೇಯ ನೇತೃತ್ವ ಕಾಂಗ್ರೆಸ್ ಪಕ್ಷದ ತಂಡ ಅಂತಿಮವಾಗಿ ವಿಜಯಸಿಂಹ ಖಾಟ್ರೋತ್ ಇವರನ್ನು ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಿದ ಹಿನ್ನೆಲೆಯಲ್ಲಿ ಏಕೈಕ ನಾಮಪತ್ರ ಸಲ್ಲಿಸಿ ಅಧ್ಯಕ್ಷರಾಗಿ ಆಯ್ಕೆಯಾದರು.

ಜತೆಗೆ ಬಿಜೆಪಿ ಪಕ್ಷದ ಸದಸ್ಯರಾಗಿದ್ದ ಹೆಚ್.ಆರ್.ನಾಗರತ್ನ ಇವರನ್ನು ಉಪಾಧ್ಯಕ್ಷರಾಗಲು ಬೆಂಬಲಿಸುವಂತೆ ಕಾಂಗ್ರೆಸ್ ಪಕ್ಷದ ಸದಸ್ಯರಿಗೆ ಹೆಚ್.ಆಂಜನೇಯ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಸಂಸದ ಗೋವಿಂದ ಕಾರಜೋಳ ಸಮಕ್ಷಮ ಉಪಾಧ್ಯಕ್ಷರು ಅವಿರೋಧ ಅಯ್ಕೆಯಾದರು.

ಬಳಿಕ ಮಾತನಾಡಿದ ಸಂಸದ ಗೋವಿಂದ ಕಾರಜೋಳ ಪುರಸಭೆಯನ್ನು ಮಾದರಿಯಾಗಿ ಪರಿವರ್ತಿಸಲು ಮೂಲಭೂತ ಸೌಲಭ್ಯಗಳನ್ನು ನಾಗರಿಕರಿಗೆ ಕಲ್ಪಿಸಿ ಕೊಡುವ ಹೊಣೆಗಾರಿಕೆ ಪುರಸಭೆ ಆಡಳಿತ ಮಂಡಳಿಗಿದೆ. ಜನರಿಗೆ ಏನೆಲ್ಲ ಸೌಲಭ್ಯ ಕಲ್ಪಿಸಲು ಅಗತ್ಯ ಆರ್ಥಿಕ ನೆರವು ಕಲ್ಪಿಸಲು ನಾನು ಪುರಸಭೆಯ 17ನೇ ಸದಸ್ಯನಂತೆ ಕೆಲಸ ಮಾಡುತ್ತೇನೆ. ಪುರಸಭೆಯ ಜನರಿಗೆ ಎಲ್ಲಾ ಮೂಲಭೂತ ಸೌಲಭ್ಯವನ್ನು ಕಲ್ಪಿಸಿ ಮಾದರಿ ಪುರಸಭೆಯನ್ನಾಗಿ ಪರಿವರ್ತಿಸುತ್ತೇವೆ ಎಂದು ತಿಳಿಸಿದರು ಪುರಸಭೆಯ ಹಿರಿಯ ಸದಸ್ಯ ಕೆ.ಸಿ. ರಮೇಶ್ ಮಾತನಾಡಿ, ಕಳೆದ 20 ವರ್ಷಗಳಿಂದ ಪುರಸಭೆಯ ಅಧಿಕಾರವನ್ನು ಕಿತ್ತುಕೊಂಡು ಸದಸ್ಯರನ್ನು ಶೋಷಣೆ ಮಾಡುತ್ತಿದ್ದ ಶಾಸಕ ಎಂ ಚಂದ್ರಪ್ಪ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಮ್ಮ ಪಟ್ಟಣದ ಅಭಿವೃದ್ಧಿಗೆ ಸಂಸದರು ನಮ್ಮ ಜೊತೆ ನಿಂತು ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಮನವಿ ಮಾಡಿದರು

.ಹಿರಿಯ ಸದಸ್ಯ ಬಿಎಸ್ ರುದ್ರಪ್ಪ ಮಾತನಾಡಿ ಪಟ್ಟಣದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕಾಗಿದೆ. ಸೂಕ್ತ ಅನುದಾನವಿಲ್ಲದೆ ಸದಸ್ಯರು ಯಾವುದೇ ಕೆಲಸಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ . ಸದಸ್ಯರು ಕೇವಲ ಕಸ ಗುಡಿಸಲು ಚರಂಡಿ ಸ್ವಚ್ಛತೆ,ನೀರು ಪೂರೈಕೆಗೆ ಸೀಮಿತರಾಗಿದ್ದಾರೆ . ಹೆಚ್ಚಿನ ಅನುದಾನವನ್ನು ಸರ್ಕಾರದಿಂದ ತಂದು ಪಟ್ಟಣದ ನಾಗರಿಕರಿಗೆ ಬೇಕಾದ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಎಲ್ಲರೂ ಒಗ್ಗೂಡಿಸಿ ಶ್ರಮಿಸಬೇಕೇಂದರು.

ಪುರಸಭೆ ನೂತನ ಅಧ್ಯಕ್ಷ ವಿಜಯ ಸಿಂಹ ಖಾಟ್ರೋತ್, ಉಪಾಧ್ಯಕ್ಷೆ ಎಚ್ ಆರ್ ನಾಗರತ್ನ ವೇದಮೂರ್ತಿ ಡಿಎಸ್ ವಿಜಯ್, ಪಿ.ಆರ್ ಮಲ್ಲಿಕಾರ್ಜುನ ಸ್ವಾಮಿ, ಸೈಯದ್ ಸಜಿಲ್, ಸೈಯದ್ ಮನ್ಸೂರ್, ವಸಂತ ರಾಜ್, ಶಬಿನ ಅಶ್ರಪ್, ಸವಿತಾ ನರಸಿಂಹ ಖಾಟ್ರೋತ್ , ಮಮತಾ ಜಯಸಿಂಹ ಖಾಟ್ರೋತ್, ಮಾಜಿ ಉಪಾಧ್ಯಕ್ಷ ಜಯಸಿಂಹ ಖಾಟ್ರೋತ್, ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಹನುಮಂತಪ್ಪ ಮುಖಂಡ ಪಾಡಿಗಟ್ಟೆ ಸುರೇಶ್, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಪಿ ಆರ್ ಶಿವಕುಮಾರ್, ಸದಸ್ಯ ಲೋಹಿತ್ ಕುಮಾರ್, ನಾಮ ನಿರ್ದೇಶಕ ಸದಸ್ಯರಾದ ಮಂಜುನಾಥ್ ಸಂಗನಗೊಂಡಿ, ಬಸವರಾಜ್ ಅಂದನೂರು ಸೈಯದ್ ಮಝುರ್, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಎ□□□ರ್ ಗಿರೀಶ್, ಬಿಜೆಪಿ ಪಕ್ಷದ ಜಿಲ್ಲಾ ಅಧ್ಯಕ್ಷ ಮರಳಿ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್ ಆರ್ ಮೋಹನ್ ನಾಗರಾಜ್ ,ಮಾಜಿ ಸದಸ್ಯ ರಾಜಶೇಖರ್, ಪ್ರಕಾಶ್ , ಬಸವರಾಜ್ ಅಗ್ರಹಾರ,

ಬಿಜೆಪಿ ಪಕ್ಷದ ಕಾರ್ಯದರ್ಶಿ ರೂಪ ಸುರೇಶ್ ಕಾಂಗ್ರೆಸ್ ಮುಖಂಡ ಪುರುಷೋತ್ತಮ ಪುರಸಭೆ ಮುಖ್ಯಾಧಿಕಾರಿ ರೇಣುಕಾ ದೇಸಾಯಿ ಸೇರಿದಂತೆ ಕಾಂಗ್ರೆಸ್ ಹಾಗೂ ಬಿಜೆಪಿ ಪಕ್ಷದ ಹಲವಾರು ಮುಖಂಡರು ಸಾವಿರಾರು ನಾಗರಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಕಂದಾಯ ಸಚಿವ ಕೃಷ್ಣಭೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಕಂದಾಯ ವಿಷಯಗಳು ಬಗರ್ ಹುಕುಂ, ನಮೂನೆ 1 ರಿಂದ 54 ಪ್ರಕರಣ, ಕಂದಾಯ ಗ್ರಾಮಗಳ ರಚನೆ ಹಕ್ಕುಪತ್ರ ವಿತರಣೆ, ನ್ಯಾಯಾಲಯ ಪ್ರಕರಣ ವಿಲೇವಾರಿ, ವಿಪತ್ತು ನಿರ್ವಹಣೆ, ಪರಿಹಾರ ವಿತರಣೆ ಹಾಗೂ ಇತರೆ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆ ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪಹಣಿ–ಆಧಾರ್ ಜೋಡಣೆ ಕಾರ್ಯವನ್ನು ಪ್ರಥಮಾದ್ಯತೆಯಾಗಿ ಪರಿಗಣಿಸಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು. ಸರ್ಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿ ಸರ್ಕಾರಿ ಆಸ್ತಿಗಳನ್ನು ಗುರುತಿಸಿ, ಹದ್ದುಬಸ್ತು ಮಾಡಿಕೊಂಡು ಲ್ಯಾಂಡ್ ಬೀಟ್ ದತ್ತಾಂಶದಲ್ಲಿ ಅಪ್‌ಲೋಡ್ ಕಾರ್ಯಕ್ರಮದಲ್ಲಿ ಉತ್ತಮ ಸಾಧನೆ ತೋರಬೇಕು. ತ್ವರಿತವಾಗಿ ಗುರಿ ಸಾಧಿಸಲು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ತಹಶೀಲ್ದಾರ್‌ಗಳು ಇದ್ದರು.



# ಡಿ.6ಕ್ಕೆ ಜಿಲ್ಲಾ ಮಟ್ಟದಯುವಜನೋತ್ಸವ

» ಚಿತ್ರದುರ್ಗ

ಡಿ.6 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಹಿಂದೆ ಡಿ.7 ರಂದು ನಿಗದಿಯಾಗಿದ್ದ ಕಾರ್ಯಕ್ರಮವನ್ನು, ಅಂದು ಗ್ರಾಮಲೆಕ್ಕಾಧಿಕಾರಿ ಸ್ಪರ್ಧಾತ್ಮ ಪರೀಕ್ಷೆ ಇರುವ ಕಾರಣ ಡಿ.6 ರಂದು ನಡೆಸಲು ತೀರ್ಮಾನಿಸಲಾಗಿದೆ. ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ದೆಗಳು ನಡೆಯಲಿವೆ.

ಜಾನಪದ ಗೀತೆ, ನೃತ್ಯ, ಕಥೆ ಹಾಗೂ ಕವನ ಬರಹ, ಭಾಷಣ, ಚಿತ್ರಕಲೆ, ವಿಜ್ಞಾನ ಮೇಳ, ಮೊಬೈಲ್ ಫೋಟೊಗ್ರಫಿ ಹಾಗೂ ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ಧಉಡುಪು ಹಾಗೂ ಆಹಾರ ಸಂಸ್ಕರಣೆ ವಿಭಾಗಗಳಲ್ಲಿ ಸ್ಪರ್ಧೆಗಳು ಜರುಗಲಿವೆ. ಚಿತ್ರದುರ್ಗ ಜಿಲ್ಲೆಯವರು ಅಥವಾ ಜಿಲ್ಲೆಯಲ್ಲಿ ವ್ಯಾಸಾಂಗ ಮಾಡುತ್ತಿರುವ 15 ವರ್ಷ ಮೇಲ್ಪಟ್ಟ ಹಾಗೂ ಸೆಪ್ಟಂಬರ್ ಅಂತ್ಯಕ್ಕೆ 29 ವರ್ಷದ ಒಳಗಿರುವವರು ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ಜಾನಪದ ಗೀತೆ ಹಾಗೂ ನೃತ್ಯ ವಿಭಾಗದಲ್ಲಿ ವೈಯಕ್ತಿಕ ಹಾಗೂ ಗುಂಪಾಗಿ ಸ್ಪರ್ಧಿಸಹುದು. ಚಿತ್ರಗೀತೆಗಳನ್ನು ಹಾಡಲು ಅವಕಾಶ ಇರುದಿಲ್ಲ.


ಪುಟ ↘ 2


ಪ್ರಮುಖ ಸುದ್ದಿ

# ಬಹುದಿನಗಳ ಬೇಡಿಕೆ; ಚಳ್ಳಕೆರೆಯಲ್ಲಿ ಸಂಶೋಧನ ಕೇಂದ್ರ ಸ್ಥಾಪನೆಗೆ ಪ್ರಾಮಾಣಿಕ ಪ್ರಯತ್ನ; ಶಾಸಕ ರಘುಮೂರ್ತಿ

» ಚಳ್ಳಕೆರೆ



ಈ ಭಾಗದ ಬಹುದಿನಗಳ ಬೇಡಿಕೆಯಾದ ಸಂಶೋಧನಾ ಕೇಂದ್ರ ಸ್ಥಾಪನೆಗೆ ಪ್ರಾಮಾಣಿಕ ಕ್ರಮವಹಿಸುವೆ. ಇದರ ಜತೆಗೆ ಕಡುಬನಕಟ್ಟೆಯಲ್ಲಿ ಐತಿಹ್ಯ ಸಾರುವ ಮಾಹಿತಿಕೇಂದ್ರ ಸ್ಥಾಪನೆಗೆ ಎಲ್ಲಾ ಸಿದ್ಧತೆ ನಡೆಸಲಾಗಿದೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ಹೇಳಿದರು.

ಅವರು, ನಗರದ ಹೆಚ್ ಪಿಪಿಸಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಕನ್ನಡ ವಿಶ್ವವಿದ್ಯಾಲಯ ಹಂಪಿ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು, ಕಾಲೇಜು ವತಿಯಿಂದ ಹಮ್ಮಿಕೊಂಡಿದ್ದ ಚಿತ್ರದುರ್ಗ ನಾಯಕ ಅರಸರು ರಾಷ್ಟ್ರೀಯ ವಿಚಾರ ಸಂಕಿರಣದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮದಕರಿನಾಯಕ, ಭರಮಣ್ಣನಾಯಕ ಸೇರಿದಂತೆ 14 ಜನ ಅರಸರು ಚಿತ್ರದುರ್ಗ ಕೋಟೆಯನ್ನು ಆಳಿದ್ದಾರೆ ಅವರ ಬಗ್ಗೆ ಸಂಪೂರ್ಣ ಅಧ್ಯಯ ನಡೆಯುಬೇಕಿದೆ. ಈಗಾಗಲೇ ಹಲವಾರು ಸಂಶೋಧಕರು ನಾಯಕ ಅರಸರುಗಳ ಬಗ್ಗೆ ಗ್ರಂಥಗಳನ್ನು ರಚಿಸಿದ್ದಾರೆ ಅವರೊಟ್ಟಿಗೆ ಮತ್ತಷ್ಟು ಅಧ್ಯಯನ ಮಾಡುವ ಅಗತ್ಯತೆ ಇದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ವಿವಿಯ ವಾಲ್ಮೀಕಿ ಅಧ್ಯಯನ ಪೀಠದ ಸಂಚಾಲಕ ಡಾ.ಅಮರೇಶಯತಗಲ್, ನಮ್ಮ ವಿಶ್ವವಿದ್ಯಾಲಯದಲ್ಲಿ ಕಳೆದ 2006ರಿಂದಲೇ ವಾಲ್ಮೀಕಿ ಅಧ್ಯಯನ ಪೀಠಪ್ರಾರಂಭಗೊಂಡು ಕರುನಾಡಿನ ಹಲವಾರು ಭಾಗಗಳಲ್ಲಿ ವಾಲ್ಮೀಕಿ ಕುರಿತು ನಡೆಯುವ ವಿಶೇಷ ಆಚರಣೆ, ಸಂಪ್ರದಾಯ, ಸಂಸ್ಕಾರ, ನುಡಿ ಹೀಗೆ ಹಲವಾರು ವಿಷಯಗಳ ಕುರಿತು ಮಾಹಿತಿ ಸಂಗ್ರಹಿಸಲಾಗಿದೆ. ವಾಲ್ಮೀಕಿ ಮರುನಿರೂಪಣೆ ಎಂಬ ವಿಷಯದಲ್ಲಿ ರಾಷ್ಟ್ರೀಯ ವಿಚಾರಸಂಕಿರಣ ಮಾಡುವ ಮೂಲಕ ರಾಷ್ಟ್ರಮಟ್ಟದಲ್ಲೂ ವಾಲ್ಮೀಕಿ ಇತಿಹಾಸವನ್ನ ಸಾರಿದೆ. ನಾಯಕ ಸಂಸ್ಕೃತಿ ಮೆಲುಕುಹಾಕಲು ಇಂತಹ ವಿಚಾರ ಸಂಕಿರಣಗಳ ಅವಶ್ಯಕತೆ ಇದೆ, ಸಂಶೋಧನಾ ವಿದ್ಯಾರ್ಥಿಗಳು ಹೆಚ್ಚು ಅಧ್ಯಾಯಶೀಲರಾಗಬೇಕು ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕನ್ನಡ ವಿವಿ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ, ನಮ್ಮ ಪ್ರದೇಶದಲ್ಲಿ ಗತಿಸಿದ ಘಟನೆ ಬಗ್ಗೆ ನಾವೇ ಅತ್ಮಾಭಿಮಾನ ಬೆಳೆಸಿಕೊಂಡಾಗ ಅದರ ಘನತೆ ಹೆಚ್ಚುತ್ತದೆ. ನಮ್ಮಲ್ಲಿ ಹಲವಾರು ಪಾಳೆಗಾರರು, ರಾಜಮನೆತನಗಳು ನೂರಾರು ಆಚರಣೆ,ಸಂಸ್ಕೃತಿ,ಸಂಸ್ಕಾರವನ್ನು ನಮಗಾಗಿ ಬಿಟ್ಟುಹೋಗಿದ್ದಾರೆ ಅದರ ಬಗ್ಗೆ ನಾವು ತಿಳಿಯಬೇಕಿದೆ. ನೂರಾರು ಅಧ್ಯಯನ ಅರಸರುಗಳ ಪರಿಶ್ರಮ, ದಕ್ಷತೆ, ಜನರಿಗೆ ನೀಡಿದ ಸೇವೆಯ ಬಗ್ಗೆ ಗುರುತಿಸಿದ್ದು ಪ್ರಾದೇಶಿಕ ಚರಿತ್ರೆ ಅಧ್ಯಯನಕ್ಕೆ ಪ್ರೇರಣೆಯಾಗಿದೆ. ಈಗಿನ ವಿದ್ಯಾರ್ಥಿಗಳು ಹೊಸ ವಿಷಯಗಳ ಬೆಳಕು ಹಾಯಿಸಬೇಕು ಎಂದರು.

ಕಾರ್ಯಕ್ರಮ ಉದ್ದೇಶಿಸಿ ಜಾನಪದ ಮತ್ತು ರಂಗಭೂಮಿ ತಜ್ಞ ಪಿ.ತಿಪ್ಪೇಸ್ವಾಮಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಆಂಧ್ರಪ್ರದೇಶದ ಕೃಷ್ಣದೇವರಾಯ ವಿವಿಯ ಪ್ರಾಧ್ಯಾಪಕ ಡಾ.ಎನ್.ಸದಾಶಿವರೆಡ್ಡಿ, ಪ್ರಾಚಾರ್ಯ ಪ್ರೊ.ಬಿ.ಎಸ್.ಮಂಜುನಾಥ್, ಲಕ್ಷ್ಮಣತೆಲಗಾವಿ, ಸಿ.ಶಿವಲಿಂಗಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯೆ ಕವಿತಾ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಾಮಿನಿ ಸದಸ್ಯರಾದ ಅನ್ವರ್‌ಮಾಸ್ಟರ್, ಆರ್.ವೀರಭದ್ರಪ್ಪ, ಸುರೇಶ್‌ಇದ್ದರು.

## ಫಾಸ್ಟ್ ನ್ಯೂಸ್

### ಡಿ.6ಕ್ಕೆ ಜಿಲ್ಲಾ ಮಟ್ಟದಯುವಜನೋತ್ಸವ

» ಮೊದಲ ಪುಟದಿಂದ

ಗುಂಪು ವಿಭಾಗದಲ್ಲಿ ಗರಿಷ್ಠ 10 ಜನರು ಭಾಗವಹಿಸಬಹುದು. ಪಂಚಪ್ರಾಣ ಎಂಬ ವಿಷಯದೊಂದಿಗೆ ಯುವಜನೋತ್ಸವ ಆಚರಿಸಲಾಗುತ್ತಿದ್ದು, ಕಥೆ, ಕವನ ಹಾಗೂ ಭಾಷಣ ಸ್ಪರ್ಧೆಗಳು ಈ ವಿಷಯವನ್ನು ಆಧಾರಿಸಿ ಸ್ಪರ್ಧಿಸಬೇಕು. ಚಿತ್ರಕಲೆಯಲ್ಲಿ ಒಬ್ಬ ಸ್ಪರ್ಧಿಗೆ ಒಂದು ರಚನೆ ಮಾತ್ರ ಅವಕಾಶವಿರುತ್ತದೆ. ವಿಜ್ಞಾನ ಮೇಳದಲ್ಲಿ ಗುಂಪು ಹಾಗೂ ವೈಯಕ್ತಿಕವಾಗಿ ಭಾಗವಹಿಸಬಹುದು. ಮೊಬೈಲ್ ಪೋಟೋಗ್ರಫಿ, ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ದಉಡುಪು ಹಾಗೂ ಆಹಾರ ಸಂಸ್ಕರಣೆ ವಿಭಾಗಗಳಲ್ಲಿ ಸೃಜನಶೀಲನೆ, ನಾವಿನ್ಯತೆ, ಕ್ರೀಯಾಶೀಲತೆ ಹಾಗೂ ತಾಂತ್ರಿಕ ಅಂಶಗಳಿಗೆ ಹೆಚ್ಚಿನ ಒತ್ತು ನೀಡಿ ವಿಜೇತರನ್ನು ಆಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು, ವಾಸಸ್ಥಳ ದಢೀಕರಣ ಅಥವಾ ವಿದ್ಯಾಸಂಸ್ಥೆಗಳಿಂದ ಪಡೆದ ದೃಢೀಕರಣ ಪತ್ರಗಳೊಂದಗೆ ಸ್ಪರ್ಧೆಗಳಲ್ಲಿ ಭಾಗಹಿಸಬೇಕು. ವಯಸ್ಸಿನ ದೃಢೀಕರಣಕ್ಕೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮುಖ್ಯೋಪಾಧ್ಯರ ದೃಢೀಕರಣಗಳ ಜೊತೆಗೆಮತದಾರಗುರುತಿನಚೀಟಿ,ಆಧಾರ್‌ಗಳನ್ನು ಪರಿಗಣಿಸಲಾಗುವುದು. ಪ್ರತಿ ಸ್ಪರ್ಧೆಯಲ್ಲಿ ಪ್ರಥಮ, ದ್ವಿತಿಯ ಹಾಗೂ ತೃತೀಯ ಸ್ಥಾನಗಳಲ್ಲಿ ವಿಜೇತರನ್ನು ಆಯ್ಕೆ ಮಾಡಲಾಗುವುದು. ನಗದು ಬಹುಮಾನೊಂದಿಗೆಪುರಸ್ಕಾರಮಾಡಲಾಗುವುದು. ಯುವಜನೋತ್ಸವಕ್ಕೆ ಆಗಮಿಸುವ ಸ್ಪರ್ಧಿಗಳಗಿಗೆ ಮಧ್ಯಾಹ್ನದ ಉಪಹಾರ ವ್ಯವಸ್ಥೆ ಇರಲಿದೆ. ಇದರೊಂದಿಗೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸುವ ಸ್ಪರ್ಧಿಗಳಿಗೆ ಪ್ರಯಾಣದರ ಭತ್ಯೆ ನೀಡಲಾಗುವುದು. ಆಸಕ್ತರು **MyBharatPortal** ನಲ್ಲಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 7760028435 ಹಾಗೂ 9945038684ಗೆ ಕರೆ ಮಾಡಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಗಿ ತಿಳಿಸಿದ್ದಾರೆ.

### ಡ್ರೋನ್ ಆಧಾರಿತ ಫೋಟೋ, ವಿಡಿಯೋಗ್ರಫಿ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024-25ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ, ಯುವತಿಯರಿಗೆ ಡ್ರೋನ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 12 ಅರ್ಜಿ ಸಲ್ಲಿಸಲು ಕೊನೆಯ ದಿನ. ಡ್ರೋನ್ ತರಬೇತಿ ನೀಡಲು ಚಿತ್ರದುರ್ಗ ಜಿಲ್ಲೆಗೆ 356 ಗುರಿ ನಿಗಧಿಪಡಿಸಲಾಗಿದ್ದು, ಅರ್ಜಿ ಸಲ್ಲಿಸಲು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಪಡೆಯಲು ಪುರಷರಿಗೆ 35 ವರ್ಷ, ಮಹಿಳೆಯರಿಗೆ 40 ವರ್ಷ ಮೀರಿರಬಾರದು. ಅಭ್ಯರ್ಥಿಯು ಪರಿಶಿಷ್ಟ ಪಂಗಡಕ್ಕೆ ಸೇರಿದ್ದು, ಕುಟುಂಬದ ವಾರ್ಷಿಕ ಆದಾಯ ರೂ.2.50ಲಕ್ಷ ಮೀರಿರಬಾರದು. ಮೂಲ ನಿವಾಸಿ ಮತ್ತು ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಪರಿಶಿಷ್ಟ ಪಂಗಡ ಸಮುದಾಯದ ಯುವಕ, ಯುವತಿಯರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯ ನೊಂದಣಿ ಸಮಯದಲ್ಲಿ ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆಗೊಂಡ ಅಂಕಪಟ್ಟಿ ಹಾಗೂ ಆಧಾರ್ ಕಾರ್ಡ್‌ನ್ನು ಸಲ್ಲಿಸಬೇಕು. ಅಭ್ಯರ್ಥಿಯು ತರಬೇತಿ ನೀಡುವ ಸ್ಥಳಕ್ಕೆ ಬರುವ ಪ್ರಯಾಣ ವೆಚ್ಚ ಹಾಗೂ ತರಬೇತಿ ಅವಧಿಯಲ್ಲಿ ಯಾವುದೇ ಶಿಷ್ಯವೇತನ ನೀಡುವುದಿಲ್ಲ.ಆಸಕ್ತ ಅರ್ಹ ಅಭ್ಯರ್ಥಿಗಳು ಚಿತ್ರದುರ್ಗ ನಗರದ ಜೆ.ಸಿ.ಆರ್ ಬಡಾವಣೆ, ಗಣಪತಿ ದೇವಸ್ಥಾನದ ಹತ್ತಿರದ ಜಿಲ್ಲಾ ಪರಿಶಿಷ್ಟ ವರ್ಗಗಳವರ ಕಚೇರಿಯಲ್ಲಿ ಅರ್ಜಿ ಪಡೆದು 2024ರ ಡಿ. 12ರ ಸಂಜೆ 5.30ರೊಳಗೆ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ರೈತ ಮಹಿಳೆಯರಿಗೆ ಕೋಳಿಮರಿ ವಿತರಣೆ: ಅರ್ಜಿ ಆಹ್ವಾನ

» ಚಿತ್ರದುರ್ಗ

2024-25ನೇ ಸಾಲಿಗೆ 5 ವಾರದ ಕೋಳಿ ಮರಿಗಳನ್ನು ಉತ್ಪಾದಿಸಿ ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ರೈತ ಮಹಿಳೆಯರಿಗೆ ತಲಾ 20ರಂತೆ ಕೋಳಿ ಮರಿಗಳನ್ನು ವಿತರಿಸಿ ಆದಾಯ ಹೆಚ್ಚಿಸುವ ಕಾರ್ಯಕ್ರಮ ಅನುಷ್ಠಾನಗೊಳಿಸುತ್ತಿದ್ದು, ಈ ಸಂಬಂಧ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿ.15 ಕೊನೆಯ ದಿನ. ರೈತ ಮಹಿಳೆಯರು, ಸ್ವ-ಸಹಾಯ ಗುಂಪಿನ ಸದಸ್ಯರು, ಪ್ರಾಥಮಿಕ ಕೋಳಿ ಸಹಕಾರ ಸಂಘಗಳಲ್ಲಿರುವ ಮಹಿಳಾ ಸದಸ್ಯರು ಮತ್ತು ರೈತ ಉತ್ಪಾದಕ ಸಂಸ್ಥೆಯ ಅರ್ಹ ಫಲಾನುಭವಿಗಳು ಅರ್ಜಿಗಳನ್ನು ಅಗತ್ಯ ಸೂಕ್ತ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ಪಶು ವೈದ್ಯಾಧಿಕಾರಿ(ಆಡಳಿತ) ಅಥವಾ ಸಹಾಯಕ ನಿರ್ದೇಶಕರಿಗೆ ಸಲ್ಲಿಸಲು ಸೂಚಿಸಿದೆ.ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಪಶುವೈದ್ಯಾಧಿಕಾರಿ 9482943111, ಚಳ್ಳಕೆರೆ 9448816499, ಹೊಳಲ್ಕೆರೆ 9972965479, ಹೊಸದುರ್ಗ 9945298407, ಹಿರಿಯೂರು 9483451044, ಮೊಳಕಾಲ್ಮೂರು 9900964820 ಗೆ ಸಂಪರ್ಕಿಸಬಹುದು.

# ಮಹಿಳಾ ನೌಕರರ ಮೇಲಿನ ದೌರ್ಜನ್ಯ ಮೂಲಭೂತ ಹಕ್ಕಿನ ಉಲ್ಲಂಘನೆ: ನ್ಯಾ.ಎಂ.ವಿಜಯ್ ಹೇಳಿಕೆ

» ಚಿತ್ರದುರ್ಗ



ಕೆಲಸದ ಸ್ಥಳದಲ್ಲಿ ಮಹಿಳಾ ನೌಕರರ ಮೇಲೆ ಆಗುತ್ತಿರುವ ಲೈಂಗಿಕ ದೌರ್ಜನ್ಯ ಮೂಲಭೂತ ಹಾಗೂ ಮಾನವ ಹಕ್ಕುಗಳ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಸರ್ವೋಚ್ಚ ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ. ಕಾರ್ಯ ನಿರ್ವಹಿಸುವ ಸ್ಥಳದಲ್ಲಿ ಮಹಿಳಾ ನೌಕರರ ಘನತೆ ಕಾಪಾಡುವುದು ಎಲ್ಲ ಪುರಷ ನೌಕರರ ಕರ್ತವ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ವಕೀಲರ ಸಂಘದ ಸಹಯೋಗದಲ್ಲಿ, ಅಂತರಾಷ್ಟ್ರೀಯ ಮಹಿಳಾ ದೌರ್ಜನ್ಯ ವಿರೋದಿ ದಿನದ ಅಂಗವಾಗಿ, ನಗರದ ಬಾಲ ಭವನದಲ್ಲಿ ಶುಕ್ರವಾರ ಆಯೋಜಿಸಲಾದ, ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ಲೈಂಗಿಕ ದೌರ್ಜನ್ಯ (ನಿರೋಧ, ನಿರ್ಬಂಧ ಹಾಗೂ ನಿವಾರಣೆ) ಕಾಯ್ದೆ-2013ರ ಕುರಿತ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕಚೇರಿಗಳಲ್ಲಿ ಮಹಿಳೆಯರು ಸ್ವತಂತ್ರವಾಗಿ ಕೆಲಸ ನಿರ್ವಹಿಸಲು ಮುಕ್ತ ವಾತಾವರಣವನ್ನು ಕಲ್ಪಿಸಬೇಕು. ಲಿಂಗಾಧಾರಿತ ಶೋಷಣೆ ತಡೆದು, ಸಮಾನತೆ, ಜೀವಿಸುವ ಹಕ್ಕು ಹಾಗೂ ವೈಯಕ್ತಿಕ ಸ್ವಾತಂತ್ರವನ್ನು ಮಹಿಳೆಯರಿಗೆ ನೀಡಬೇಕು. ಸ್ವಾತಂತ್ರ ನಂತರ ದೇಶದಲ್ಲಿ ಮಹಿಳೆಯರ ರಕ್ಷಣೆಗೆ ಸಾಕಷ್ಟು ಕಾಯ್ದೆಗಳು ಜಾರಿಯಾದರೂ, ಕೆಲಸದ ಸ್ಥಳದಲ್ಲಿ ಮಹಿಳೆಯರಿಗೆ ರಕ್ಷಣೆ ನೀಡಲು ಪ್ರತ್ಯೇಕ ಕಾನೂನು ಇರಲಿಲ್ಲ. 1997 ರಲ್ಲಿ ಬನ್ವಾರಿ ಪ್ರಕರಣದ ವಿಚಾರಣೆ ನಡೆಸಿದ ಸರ್ವೋಚ್ಚ ನ್ಯಾಯಾಲಯ ಕೆಲಸ ಸ್ಥಳದಲ್ಲಿ ಮಹಿಳೆಯರ ರಕ್ಷಣೆಗಾಗಿ ವಿಶಾಕ ಮಾರ್ಗಸೂಚಿಗಳನ್ನು ರೂಪಿಸಿತು. ಇದನ್ನು ಆಧರಿಸಿ 2013 ರಲ್ಲಿ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ಲೈಂಗಿಕ ದೌರ್ಜನ್ಯ (ನಿರೋಧ, ನಿರ್ಬಂಧ ಹಾಗೂ ನಿವಾರಣೆ) ಕಾಯ್ದೆ ಜಾರಿ ಮಾಡಲಾಗಿದೆ. ಇದಕ್ಕೂ ಮೊದಲು 1979 ರಲ್ಲಿ ವಿಶ್ವ ಸಂಸ್ಥೆ ಕಾರ್ಯಸ್ಥಳಗಳಲ್ಲಿ ಮಹಿಳೆಯರ ವಿರುದ್ಧದ ಎಲ್ಲ ತಾರತಮ್ಯ ಹಾಗೂ ದೌರ್ಜನ್ಯಗಳನ್ನು ತಡೆಯಲು ಸಮಾವೇಶ ನಡೆಸಿ ಅಂತರಾಷ್ಟ್ರೀಯ ಒಪ್ಪಂದವನ್ನು ಜಾರಿ ಮಾಡಿತು. 1993 ರಲ್ಲಿ ಭಾರತ ಈ ಒಪ್ಪಂದಕ್ಕೆ ಸಹಿ ಹಾಕಿತು. ಆದಾಗ್ಯೂ ಪ್ರತ್ಯೇಕ ಕಾನೂನು ರಚಿಸಲು ಸುಮಾರು 20 ವರ್ಷಗಳ ಸುದೀರ್ಘ ಕಾಲ ಹಿಡಿದಿದ್ದು, ದೇಶದ ರಾಜಕೀಯ ವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ನ್ಯಾ.ಎಂ.ವಿಜಯ್ ವಿಷಾದ ವ್ಯಕ್ತ ಪಡಿಸಿದರು.

ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪಂಚಾಯತಿಯಲ್ಲಿ ಮಹಿಳಾ ನೌಕರರ ರಕ್ಷಣೆ ಕ್ರಮ ವಹಿಸಿ, ಆಂತರಿಕ ಸಮಿತಿ ರಚನೆ ಮಾಡಲಾಗಿದೆ. ಪುರಷ ಪ್ರಾಧನ ಸಮಾಜದ ಮನೋಭಾವ ಹಾಗೂ ಚಿಂತನೆಯಲ್ಲಿ ಬದಲಾವಣೆಯಾದರೆ, ದೌರ್ಜನ್ಯಗಳು ಕಡಿಮೆಯಾಗುತ್ತವೆ.

ಜಿ.ಪಂ. ವತಿಯಿಂದ ಮಹಿಳಾ ಆಧಾರಿತ ಕಾರ್ಯಕ್ರಮಗಳನ್ನು ಜಾರಿ ಮಾಡಲಾಗುತ್ತಿದೆ. ಘನತ್ಯಾಜ್ಯ ವಿಲೇವಾರಿ ಮಾಡುವ ಆಟೋ ಟಿಪ್ಪರ್‌ಗಳ ವಾಹನ ಚಾಲನೆ ತರಬೇತಿಯನ್ನು ಮಹಿಳಾ ಕಾರ್ಮಿಕರಿಗೆ ನೀಡಲಾಗಿದೆ. ನಲ್-ಜಲ್-ಮಿತ್ರ ಯೋಜನೆಯಡಿ ನೀರುಗಂಟಿ ಕೆಲಸಕ್ಕೂ ಮಹಿಳೆಯರನ್ನು ನೇಮಿಸಲಾಗುತ್ತಿದೆ. ಈ ಬಗ್ಗೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಮಹಿಳಾ ನೀರುಗಂಟಿಗಳಿಗೆ ತರಬೇತಿ ನೀಡಲಾಗುವುದು. ಇದರೊಂದಿಗೆ ಜಿಲ್ಲಾಧಿಕಾರಿ ಕಚೇರಿ ಆವರಣ ಸೇರಿದಂತೆ ನಗರದ ಎರೆಡು ಕಡೆ, ಸಂಪೂರ್ಣವಾಗಿ ಮಹಿಳೆಯರಿಂದಲೇ ನಿರ್ವಹಿಸುವ ಅಕ್ಕಾಕೆಫೆಗಳನ್ನು ತೆರಯಲಾಗುವುದು. ಇದಕ್ಕಾಗಿ ಮಹಿಳಾ ಸ್ವ ಸಹಾಯ ಗುಂಪುಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಮಹಿಳಾ ಸ್ವ ಸಹಾಯ ಗುಂಪುಗಳು ತಯಾರಿಸುವ ಉತ್ಪನ್ನಗಳಿಗೆ ಇ-ಮಾರುಕಟ್ಟೆ ಕಲ್ಪಿಸಲು ತಂತ್ರಾಂಶ ರೂಪಿಸಲಾಗುತ್ತಿದೆ. ಈ ಬಗ್ಗೆ ಆಯ್ದ ಮಹಿಳಾ ಸ್ವ ಸಹಾಯ ಗುಂಪುಗಳ ಸದಸ್ಯರಿಗೆ ಬೆಂಗಳೂರಿನಲ್ಲಿ ಮಾರುಕಟ್ಟೆ ಕುರಿತು ತರಬೇತಿ ನೀಡಲಾಗುವುದು ಎಂದು ಸಿಇಓ ಎಸ್.ಜೆ.ಸೊಮಶೇಖರ್ ತಿಳಿಸಿದರು.

ಜಿಲ್ಲಾ ಆಂತರಿಕ ಸಮಿತಿ ಅಧ್ಯಕ್ಷೆ ಹಾಗೂ ಮಕ್ಕಳ ಕಲ್ಯಾಣ ಸಮಿತಿ ಸದ್ಯಸೆ ಡಿ.ಕೆ.ಶೀಲಾ ಮಾತನಾಡಿ, 2013ರ ಕಾಯ್ದೆಯ ಅನುಸಾರ 10 ಕ್ಕಿಂತ ಹೆಚ್ಚು ಮಹಿಳೆಯರು ಕೆಲಸ ಮಾಡುವ ಸ್ಥಳದಲ್ಲಿ, ಹಿರಿಯ ಮಹಿಳಾ ನೌಕರರ ಅಧ್ಯಕ್ಷತೆಯಲ್ಲಿ ಆಂತರಿಕ ಸಮಿತಿ ರಚಿಸಬೇಕು. ಮಹಿಳೆಯರು ದೂರು ಸಲ್ಲಿಸಲು ಅನುವಾಗುವಂತೆ ದೂರ ಪೆಟ್ಟಿಗೆ ಇರಿಸಬೇಕು. ಸಮಿತಿ ರಚನೆ ಬಗ್ಗೆ ಹಾಗೂ ಮಹಿಳಾ ನೌಕರರಿಗೆ ಮೇಲಿನ ಲೈಂಗಿಕ ದೌರ್ಜನ್ಯವನ್ನು ನಿಷೇಧಿಸಲಾಗಿದೆ ಎಂದು ಕೆಲಸದ ಸ್ಥಳದಲ್ಲಿ ಸಾರ್ವಜನಿಕರಿಗೆ ಗೋಚರವಾಗುವಂತೆ ಫಲಕಗಳನ್ನು ಅಳವಡಿಸಬೇಕು. ಕಾಯ್ದೆಯ ದುರುಪಯೋಗ ಪಡಿಸಿಕೊಂಡರೆ ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.

ಸಭೆಯಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ನಿರೂಪಣಾಧಿಕಾರಿ ವಿಜಯ್‌ಕುಮಾರ್ ಸೇರಿದಂತೆ, ಹಲವು ಇಲಾಖೆಗಳ ಆಂತರಿಕ ಸಮಿತಿ ಮುಖ್ಯಸ್ಥರು ಭಾಗವಹಿಸಿದ್ದರು. ಹಿರಿಯ ಸಹಾಯಕ ನಿರ್ದೇಶಕಿ ಪವಿತ್ರಾ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ಲೈಂಗಿಕ ದೌರ್ಜನ್ಯ (ನಿರೋಧ, ನಿರ್ಬಂಧ ಹಾಗೂ ನಿವಾರಣೆ) ಕಾಯ್ದೆ-2013ರ ಕುರಿತು ಸುದೀರ್ಘ ಉಪನ್ಯಾಸ ನೀಡಿದರು.

## ನಗರಸಭೆ ಆಯವ್ಯಯದ ಪೂರ್ವಬಾವಿ ಸಭೆ

# ನಗರಸಭೆಯ ಆಡಳಿತ ವೈಖರಿಯ ಬಗ್ಗೆ ಆಡಳಿತ ಪಕ್ಷದ ಸದಸ್ಯರಿಂದಲೇ ಅಸಮದಾನ

» ಚಳ್ಳಕೆರೆ




ನಗರಸಭೆಯ 2025-26ನೇ ಸಾಲಿನ ಆಯವ್ಯಯ ಮಂಡನೆ ಹಿನ್ನೆಲೆಯಲ್ಲಿ ಮೊದಲ ಬಾರಿಗೆ ಸಾರ್ವಜನಿಕರೊಂದಿಗೆ ಸಮಾಲೋಚನಾ ಸಭೆಯನ್ನು ಶುಕ್ರವಾರ ನಗರಸಭೆ ಸಭಾಂಗಣದಲ್ಲಿ ನಡೆಸಲಾಯಿತು. ಪ್ರಾರಂಭದಲ್ಲಿ ಪೌರಾಯುಕ್ತ ಜಗರೆಡ್ಡಿ ಎಲ್ಲರನ್ನೂ ಸ್ವಾಗತಿಸಿದರು.

ನಗರಸಭೆಯ ಆಯವ್ಯಯ ಸಿದ್ಧತಾ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದ ಹಿರಿಯ ಕಾಂಗ್ರೆಸ್ ಮುಖಂಡ ಟಿ.ಪ್ರಭುದೇವ್, ಶಿವಕುಮಾರ್, ನಾಮಿನಿ ಸದಸ್ಯ ನೇತಾಜಿಪ್ರಸನ್ನ, ಆರ್.ಪ್ರಸನ್ನಕುಮಾರ್, ಬಿ.ಪರೀದ್‌ಖಾನ್ ಮುಂತಾದವರು ಪೂರ್ವಭಾವಿ ಸಭೆಯಲ್ಲಿ ಸಾರ್ವಜನಿಕರು ನೀಡುವ ಸಲಹೆ ಸೂಚನೆಗಳನ್ನು ಪಡೆದ ನಂತರ ಅವುಗಳನ್ನು ಸೂಕ್ತ ರೀತಿಯಲ್ಲಿ ಸದ್ಬಿನಿಯೋಗ ಮಾಡಿಕೊಳ್ಳುತ್ತಿಲ್ಲವೆಂದು ಆರೋಪಿಸಿದರು.

ಚಳ್ಳಕೆರೆ ನಗರಸಭೆ ಅಭಿವೃದ್ಧಿ ಪಥದತ್ತ ಮುನ್ನಡೆಯಬೇಕಿದೆ, ಸಮಾಲೋಚನಾಸಭೆಯಲ್ಲಿ ಸಾರ್ವಜನಿಕರಿಂದ ಬಂದ ಎಲ್ಲಾ ಅಭಿಪ್ರಾಯಗಳನ್ನು ಕಾರ್ಯಗತಗೊಳಿಸಲು ನಗರಸಭೆ ಆಡಳಿತ ಮುಂದಾಗಬೇಕು. ನಗರಸಭೆ ಆಡಳಿತದಿಂದ ಆಗುವ ಎಲ್ಲಾ ಲೋಪದೋಷಗಳ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಿದಾಗ ಅದನ್ನು ಪರಿಶೀಲಿಸಿ ಸಮಸ್ಯೆಯನ್ನು ಇತ್ಯರ್ಥಗೊಳಿಸುವ ಕಾರ್ಯ ನಿರಂತರವಾಗಿ ನಡೆಯಲಿ ಎಂದರು.

ಅಧ್ಯಕ್ಷತೆಯನ್ನು ನಗರಸಭೆ ಅಧ್ಯಕ್ಷೆ ಜೈತುಂಬಿ ವಹಿಸಿದ್ದರು, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಎಸ್.ಜಯಣ್ಣ, ಕೆ.ವೀರಭದ್ರಪ್ಪ, ಎಂ.ಜೆ.ರಾಘವೇಂದ್ರ, ಟಿ.ಮಲ್ಲಿಕಾರ್ಜುನ್, ಪಾಲಮ್ಮ, ಕವಿತಾಬೋರಯ್ಯ, ನಾಗಮಣಿ, ಸಾಕಮ್ಮ, ನಿರ್ಮಲ, ನಾಮಿನಿ ಸದಸ್ಯರಾದ ಆರ್.ವೀರಭದ್ರಪ್ಪ, ಅನ್ವರ್‌ಮಾಸ್ಟರ್, ನಟರಾಜ್ ಮುಂತಾದವರು ಉಪಸ್ಥಿತರಿದ್ದರು.



**ಚಳ್ಳಕೆರೆ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಿದ್ದ ಚಿತ್ರದುರ್ಗ ನಾಯಕ ಅರಸರು ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಲೇಖಕ ಡಾ.ಜಿ.ವಿ.ರಾಜಣ್ಣ ರಚಿತ ಜ್ಞಾನಸಂಗಮ ಸಂಶೋಧನಾ ಕೃತಿಯನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯ ಕುಲಪತಿ ಡಾ. ಡಿ.ವಿ.ಪರಮಶಿವಮೂರ್ತಿ ಬಿಡುಗಡೆಗೊಳಿಸಿದರು. ಪಿ.ತಿಪ್ಪೇಸ್ವಾಮಿ, ಲಕ್ಷ್ಮಣತೆಲಗಾವಿ, ಲೇಖಕ ರಾಜಣ್ಣ, ಕೆ.ಚಿತ್ತಯ್ಯ, ರೇಣುಪ್ರಸಾದ್ ಮೊದಲಾದವರು ಇದ್ದರು.**

## ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆ ಕ್ರೀಡಾ ಚಟುವಟಿಕೆಗಳು ಅತಿ ಮುಖ್ಯ




» ಚಿತ್ರದುರ್ಗ

ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು ಅತಿ ಮುಖ್ಯವಾಗಿ ಬೇಕು. ಇದರಿಂದ ಮಾನಸಿಕ ಹಾಗೂ ದೈಹಿಕವಾಗಿ ಲವಲಿಕೆಯಿಂದಿರಲು ಸಾಧ್ಯ ಎಂದು ಮಾದಾರ ಚನ್ನಯ್ಯಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಹೇಳಿದರು.ಎಸ್.ಆರ್.ಎಸ್.ಕಾಲೇಜಿನಲ್ಲಿ ಶುಕ್ರವಾರ ನಡೆದ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬರಪೀಡಿತ ಪ್ರದೇಶದಲ್ಲಿ ಎರಡು ಮೂರು ದಶಕಗಳ ಹಿಂದೆ ಮಠ ಮಾನ್ಯಗಳು ವಿದ್ಯಾಸಂಸ್ಥೆಯನ್ನು ಆರಂಭಿಸಿದವು. ಖಾಸಗಿ ಶಿಕ್ಷಣ ಸಂಸ್ಥೆಗಳ ಸೇವೆ ವಿರಳವಾಗಿದ್ದ ಕಾಲದಲ್ಲಿ ಬಿ.ಎ.ಲಿಂಗಾರೆಡ್ಡಿರವರು ಎಸ್.ಆರ್.ಎಸ್. ಶಿಕ್ಷಣ ಸಂಸ್ಥೆಯನ್ನು ತೆರೆದು ಮಕ್ಕಳಿಗೆ ಗುಣ ಮಟ್ಟದ ಶಿಕ್ಷಣ ನೀಡಲು ಆರಂಭಿಸಿದರು. ಇಲ್ಲಿ ನಡೆಯುತ್ತಿರುವ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಯನ್ನು ನೋಡಿದರೆ ರಾಜಧಾನಿ ಬೆಂಗಳೂರಿನಲ್ಲಿ ನಡೆಯುತ್ತಿದೆಯೇನೋ ಅನ್ನಿಸುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಇಲ್ಲಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಿ ಎತ್ತರೆತ್ತಕ್ಕೆ ಬೆಳೆಯಲಿ ಎಂದು ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ ಶುಭ ಹಾರೈಸಿದರು. ಸಂಸದ ಗೋವಿಂದಕಾರಜೋಳ ಮಾತನಾಡಿ ಎಸ್.ಆರ್.ಎಸ್. ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳ ಕಲಿಕೆಗೆ ಉತ್ತಮ ವಾತಾವರಣವಿದೆ. ಪಠ್ಯೇತರ ಚಟುವಟಿಕೆ ಜೊತೆ ಮಕ್ಕಳು ಸಾಂಸ್ಕೃತಿಕ ಹಾಗೂ ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗುವುದರ ಜೊತೆಗೆ ತಮ್ಮಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರತರಲು ಸಹಕಾರಿಯಾಗಲಿದೆ ಎಂದರು.ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ಎಸ್.ಆರ್.ಎಸ್. ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಕಾರ್ಯದರ್ಶಿ ಸುಜಾತ ಲಿಂಗಾರೆಡ್ಡಿ, ಅಮೋಘ, ಲಿಖಿತಅಮೋಘ, ಕರ್ನಾಟಕ ಚೆಸ್ ಅಸೋಸಿಯೇಷನ್ ಅಧ್ಯಕ್ಷ ಮಧುಕರ್ ವೇದಿಕೆಯಲ್ಲಿದ್ದರು.

## ಪ್ರಮುಖ ಸುದ್ದಿ

# ವಿದ್ಯಾರ್ಥಿಗಳಲ್ಲಿ ಅಡಗಿರುವ ಅಗಾದವಾದ ಪ್ರತಿಭೆ ಗುರುತಿಸಿ ಬೆಳೆಸುವ ಜವಾಬ್ದಾರಿ ಎಲ್ಲರದ್ದು: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ವಿದ್ಯಾರ್ಥಿಗಳ ಕ್ರಿಯಾಶೀಲತೆಯನ್ನು ಹೆಚ್ಚಿಸುವಲ್ಲಿ ಪ್ರತಿಭಾಕಾರಂಜಿ ಉತ್ತಮ ಕಾರ್ಯಕ್ರಮವೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಸ್ವಾಮವಿವೇಕಾನಂದ ಪ್ರೌಢಶಾಲಾ ಆವರಣದಲ್ಲಿ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 2024-25ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳ ತಾಲ್ಲೂಕು ಮಟ್ಟದ ಪ್ರತಿಭಾಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ, ಅದರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಿಕ್ಷಣ ಇಲಾಖೆ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಇನ್ನೂ ಹೆಚ್ಚಿನ ಉತ್ತಮ ಮಾರ್ಗದರ್ಶನ ಮಾಡಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ತಾಲ್ಲೂಕು ಮಟ್ಟದ ಈ ಕಾರ್ಯಕ್ರಮದಲ್ಲಿ ಸುಮಾರು ಎರಡು ಸಾವಿರ ವಿದ್ಯಾರ್ಥಿಗಳು ಪಾಲ್ಗೊಂಡಿದ್ದಾರೆ. ಒಟ್ಟು 13 ವಿಭಾಗದಲ್ಲಿ ವಿವಿಧ ಸ್ಪರ್ಧೆ ಏರ್ಪಡಿಸಿದೆ. 135 ಶಿಕ್ಷಕರು ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದ್ದಾರೆ. ಶಾಸಕರ ಸೂಚನೆಯಂತೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಉತ್ತಮ ಫಲಿತಾಂಶಕ್ಕೆ ಪಾಸಿಂಗ್ ಮತ್ತು ಸ್ಕೋರಿಂಗ್ ಪ್ಯಾಕೇಜ್ ಪುಸ್ತಕವನ್ನು ಸಿದ್ದಪಡಿಸಿದೆ ಎಂದರು.

ನಗರಸಭಾ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಒ.ಸುಜಾತ, ಸದಸ್ಯರಾದ ಸಿ.ಕವಿತಾ, ಸುಮಭರಮಯ್ಯ, ಎಂ.ಜೆ.ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಚಳ್ಳಕೆರೆಯಪ್ಪ, ಸುಮಕ್ಕ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಾಮಿನಿ ಸದಸ್ಯ ಆರ್.ವೀರಭದ್ರಪ್ಪ, ಕೆ.ಎಂ.ನಟರಾಜ್, ಬಡಗಿಪಾಪಣ್ಣ, ದೈಹಿಕ ಶಿಕ್ಷಣ ಪರಿವೀಕ್ಷಕ ಸುನೀಲ್‌ನಾಯ್ಕ, ಜಿ.ಟಿ.ಮಂಜುನಾಥಸ್ವಾಮಿ, ಪಿ.ಮಾರುತಿಭಂಡಾರಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಡಿ.3ರಂದು ವಿಶ್ವ ವಿಕಲಚೇತನರ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಇಲಾಖೆ, ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳು ಹಾಗೂ ವಿವಿಧೋದ್ದೇಶ ನಗರ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸಹಯೋಗದಲ್ಲಿ ಡಿಸೆಂಬರ್ 03ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತ.ರಾ.ಸು ರಂಗಮಂದಿರದಲ್ಲಿ "ವಿಶ್ವ ವಿಕಲಚೇತನರ ದಿನಾಚರಣೆ" ಹಮ್ಮಿಕೊಳ್ಳಲಾಗಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು. ಸಂಸದ ಗೋವಿಂದ ಎಂ.ಕಾರಜೋಳ ಘನ ಉಪಸ್ಥಿತಿ ವಹಿಸುವರು. ಶಾಸಕಕೆ.ಸಿ.ವೀರೇಂದ್ರ(ಪಪ್ಪಿ)ಅಧ್ಯಕ್ಷತೆವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್ ರಾಘವೇಂದ್ರ ಹಾಗೂ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಭಾಗವಹಿಸುವರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ದುಡ್ಡು, ಅಧಿಕಾರ ಇದ್ದವರಲ್ಲ ಬಲಿಷ್ಟರು, ಸ್ವಾಭಿಮಾನಿಗಳೇ ಶಕ್ತಿಶಾಲಿ

» ದಾವಣಗೆರೆ

ದುಡ್ಡು, ರಾಜಕೀಯ ಅಧಿಕಾರ ಇದ್ದಾಕ್ಷಣ ಬಲಿಷ್ಠರಲ್ಲ. ಸ್ವಾಭಿಮಾನಿಗಳು ಹಾಗೂ ಅತ್ಯುತ್ತಮ ವ್ಯಕ್ತಿತ್ವ ರೂಪಿಸಿಕೊಂಡವರು ಪವರ್ ಫುಲ್. ಇಂಥ ನಂಬಿಕೆ ಹೊಂದಿದವರೇ ಪ್ರಭಾವಶಾಲಿಗಳು ಎಂದು ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅಭಿಪ್ರಾಯಪಟ್ಟರು. ಜಗಳೂರು ಪಟ್ಟಣದ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯದ ಸಭಾಂಗಣದಲ್ಲಿ ಏರ್ಪಡಿಸಿದ್ದ 202–24ನೇ ಸಾಲಿನ ಅಂತಿಮ ವರ್ಷದ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ದೀಪದಾನ ಕಾರ್ಯಕ್ರಮ ಮತ್ತು ಬೀಳ್ಕೊಡುಗೆ ಸಮಾರಂಭದಲ್ಲಿ ವಿಶೇಷ ಆಹ್ವಾನಿತರಾಗಿ ಪಾಲ್ಗೊಂಡು ಅವರು ಮಾತನಾಡಿದರು.ನಮ್ಮ ಆಲೋಚನೆಯಿಂದಲೇ ಅಸಮಾನತೆ ಶುರುವಾಗುತ್ತಿದೆ. ಅಮೆರಿಕಾ, ಇಂಗ್ಲೆಂಡ್ ನಂಥ ದೇಶಗಳಲ್ಲಿ ಅಧ್ಯಕ್ಷರು ಸೈಕಲ್ ನಲ್ಲಿ ವಾಕಿಂಗ್ ಮಾಡಿದರೂ ಯಾರೂ ತಲೆಕೆಡಿಸಿಕೊಳ್ಳುವುದಿಲ್ಲ. ಆದ್ರೆ, ಭಾರತದಲ್ಲಿ ಪರಿಸ್ಥಿತಿ ಇದಕ್ಕೆ ತದ್ವಿರುದ್ಧ ಇದೆ. ಅಂಥದ್ದೊಂದು ಅನಿಷ್ಟ ಪದ್ಧತಿ ಬೆಳೆದುಕೊಂಡು ಬಂದಿದೆ. ರಾಜಕೀಯದಲ್ಲಿ ಅಧಿಕಾರದಲ್ಲಿದ್ದರೆ ದೊಡ್ಡ ಮನುಷ್ಯರು ಎಂಬಂತೆ ಬಿಂಬಿಸಲಾಗುತ್ತಿದೆ. ವಾಮ ಮಾರ್ಗ, ಅಡ್ಡ ದಾರಿ ಹಿಡಿದು ದುಡ್ಡು ಹಂಚಿ ಚುನಾವಣೆ ಗೆಲ್ಲುವುದು ಸಾಮಾನ್ಯ ಎಂಬಂತಾಗಿಬಿಟ್ಟಿದೆ. ಗೆದ್ದ ಮೇಲೆ ಜನರ ಸೇವೆಯತ್ತ ಗಮನವನ್ನೇ ನೀಡುವುದಿಲ್ಲ. ಇದು ಪ್ರಜಾಪ್ರಭುತ್ವದ ಅಣಕ ಎಂದು ಬೇಸರ ವ್ಯಕ್ತಪಡಿಸಿದರು.ಪ್ರತಿಯೊಬ್ಬರೂ ಸ್ವಾಭಿಮಾನಿಗಳಾಗಬೇಕು, ಈಗಿನಿಂದಲೇ ಎಚ್ಚೆತ್ತುಕೊಳ್ಳಬೇಕು. ಯಾವ ಕ್ಷೇತ್ರದಲ್ಲಿ ಮುಂದುವರಿದರೂ ನಿಮ್ಮದೇ ಆದ ಛಾಪು ಮೂಡಿಸುವಂತಾಗಬೇಕು. ಆಗ ಮಾತ್ರ ಜೀವನದಲ್ಲಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ಪ್ರತಿಪಾದಿಸಿದರು.ಉಜ್ವಲವಾಗುತ್ತಿರುವ ದೀಪ ಆರಿಸಲು ನಮ್ಮ ಸುತ್ತಮುತ್ತಲಿನ ತುಂಬಾ ಜನರು ಕಾಯುತ್ತಿರುತ್ತಾರೆ. ಇದು ದೊಡ್ಡ ದುರಂತ. ಉಜ್ವಲವಾಗಿ ಬೆಳೆಯಲು ಆರಂಭಿಸುತ್ತಿದ್ದಂತೆ ಭವಿಷ್ಯ ಆರಿಸಲು ಬರುತ್ತಾರೆ. ಇಂಥವರಿಂದ ಸ್ವಲ್ಪ ದೂರ ಇರಬೇಕು. ಆಗ ಮಾತ್ರ ನಿಮ್ಮಲ್ಲೂ, ಸಮಾಜದಲ್ಲಿಯೂ ಬದಲಾವಣೆ ತರಲು ಸಾಧ್ಯವಾಗುತ್ತದೆ. ಸಾಧನೆ ಮಾಡಬೇಕಾದರೆ ನೋವು, ಅಪಮಾನ ಎದುರಿಸಬೇಕಾಗುತ್ತದೆ. ಇದು ಸಹಜ ಪ್ರಕ್ರಿಯೆ. ಇನ್ನೊಬ್ಬರ ಮೇಲೆ ಅವಲಂಬನೆ ಆಗುವುದನ್ನು ಬಿಡಬೇಕು. ಎಷ್ಟೇ ದೊಡ್ಡ ಬಿರುಗಾಳಿ ಬಂದರೂ ಎದುರಿಸಿ ನಿಲ್ಲುತ್ತೇನೆಂಬ ಛಲ ಇರಬೇಕು. ನಿರಂತರ ಕಲಿಕೆ ಇರಬೇಕು, ನಿಂತ ನೀರಾಗಬಾರದು. ಈ ಹಿಂದೆಯೇ ಬಸವಣ್ಣನವರು ಹೇಳಿದಂತೆ ಸ್ಥಾವರಕ್ಕೆ ಅಳಿವುಂಟು ಜಂಗಮಕ್ಕೆ ಅಳಿವಿಲ್ಲ ಎಂಬುದು ಇಂದಿಗೂ ಸತ್ಯ ಎಂದು ತಿಳಿಸಿದರು.ಲೋಚನಾ ಶಕ್ತಿ, ಪ್ರಶ್ನಿಸುವ ಗುಣ, ಸ್ವಾವಲಂಬನೆಯತ್ತ ಹೆಚ್ಚು ಒತ್ತು ನೀಡಬೇಕು. ಆಗ ಅವಕಾಶಗಳು ನಮ್ಮನ್ನು ಹುಡುಕಿಕೊಂಡು ಬರುತ್ತವೆ. ಹಲವಾರು ರೀತಿಯ ದೃಷ್ಟಿಕೋನ ಬೆಳೆಸಿಕೊಂಡಾಗ ನಮಗೆ ಜೀವನದಲ್ಲಿ ಅನೇಕ ಸಾಧ್ಯತೆಗಳು ಕಾಣಿಸುತ್ತವೆ. ವ್ಯಕ್ತಿತ್ವ, ಮೌಲ್ಯ, ಯೋಗ್ಯತೆಯನ್ನು ನಾವೇ ಹೆಚ್ಚಿಸಿಕೊಳ್ಳಬೇಕು. ಇದೆಲ್ಲಾ ಸಾಧ್ಯವಾಗಬೇಕಾದರೆ ನಿರಂತರ ಓದು, ಸಂಘಟನೆ, ಆಲೋಚನಾ ಶಕ್ತಿಯಿಂದ ಮಾತ್ರ ಸಾಧ್ಯ. ನಮ್ಮ ಸುತ್ತಮುತ್ತಲಿನ ಪರಿಸರ ಕಳಪೆಯಾಗಿದ್ದರೆ ನಾವೂ ದಿನ ಕಳೆದಂತೆ ಕಳಪೆಯಾಗುತ್ತೇವೆ ಎಂದು ಹೇಳಿದರು.ನಾನು ಬಡತನದಲ್ಲಿ ಹುಟ್ಟಿ ಬೆಳೆದಿದ್ದು. ಸತತ ಓದು, ಸಾಧನೆ ಮಾಡಬೇಕೆಂಬ ಹಂಬಲ, ಉತ್ತಮ ಸಂಸ್ಕಾರ, ಸ್ವಾವಲಂಬಿಯಾಗಿ ಹೋರಾಡಿದ ಪರಿಣಾಮ ಈಗ ಇನ್ ಸೈಟ್ಸ್ ಐಎಎಸ್ ಸಂಸ್ಥೆ ಕಟ್ಟಲು ಸಾಧ್ಯವಾಗಿದೆ.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅಧ್ಯಕ್ಷ ಆರ್.ಪ್ರಕಾಶ್ ಸೂಚನೆ

# ಗ್ಯಾರಂಟಿ ಫಲಾನುಭವಿಗಳ ಪಟ್ಟಿ ಪ್ರಚುರಪಡಿಸಿ

» ಚಿತ್ರದುರ್ಗ



ರಾಜ್ಯ ಸರ್ಕಾರ ರೂಪಿಸಿರುವ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಪಟ್ಟಿಯನ್ನು ಚಿತ್ರದುರ್ಗ ತಾಲ್ಲೂಕಿನ ಪ್ರತಿ ಗ್ರಾಮದಲ್ಲಿಯೂ ಪ್ರಚುರಪಡಿಸಲು ತಕ್ಷಣವೇ ಅಗತ್ಯ ಕ್ರಮ ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷ ಆರ್.ಪ್ರಕಾಶ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಪಟ್ಟಂತೆ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿತ್ರದುರ್ಗ ತಾಲ್ಲೂಕಿನ ಎಲ್ಲ ಗ್ರಾಮಗಳ ಅಂಗನವಾಡಿ ಕೇಂದ್ರಗಳಲ್ಲಿ ಗೃಹಲಕ್ಷ್ಮೀ ಯೋಜನೆಗಳ ಫಲಾನುಭವಿಗಳ ಪಟ್ಟಿ, ಎಲ್ಲ ನ್ಯಾಯಬೆಲೆ ಅಂಗಡಿಗಳಲ್ಲಿ ಅನ್ನಭಾಗ್ಯ ಯೋಜನೆಗಳ ಫಲಾನುಭವಿಗಳ ಪಟ್ಟಿ ಹಾಗೂ ಬೆಸ್ಕಾಂ ಕಚೇರಿಯ ಸೂಚನಾ ಫಲಕಗಳಲ್ಲಿ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಪಟ್ಟಿಯನ್ನು ಪ್ರಚುರ ಪಡಿಸಬೇಕು. ಶಕ್ತಿ ಯೋಜನೆ ಕುರಿತು ಬಸ್‌ಗಳಲ್ಲಿ ಹಾಗೂ ಬಸ್ ನಿಲ್ದಾಣಗಳಲ್ಲಿ ಆಡಿಯೋ ಮತ್ತು ವಿಡಿಯೋ ಜಿಂಗಲ್ಸ್ ಪ್ರದರ್ಶಿಸಬೇಕು. ಯುವ ನಿಧಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಹೇಳಿದರು.ಗ್ಯಾರಂಟಿ ಯೋಜನೆಗಳಿಂದ ಹೊರಗುಳಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಗ್ಯಾರಂಟಿ ಯೋಜನೆಗಳ ಲಾಭ ತಲುಪಿಸಲು ಅಧಿಕಾರಿಗಳು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದ ಅವರು, ಯಾವುದೇ ಮಧ್ಯವರ್ತಿಗಳಿಲ್ಲದೆ ಗ್ಯಾರಂಟಿ ಯೋಜನೆಗಳ ಮೂಲಕ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಪಾವತಿಯಾಗುತ್ತಿದ್ದು, ಇದು ಪ್ರಸಕ್ತ ಸರ್ಕಾರದ ಮಹತ್ವದ ಸಾಧನೆಯಾಗಿದೆ ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ಚಿತ್ರದುರ್ಗ ಮೊದಲ ಸ್ಥಾನ ಅಲಂಕರಿಸಲಿ: ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಬರಪೀಡಿತ ಚಿತ್ರದುರ್ಗ ಜಿಲ್ಲೆಯು ಮೊದಲ ಸ್ಥಾನ ಪಡೆಯಲು ಪರಿಣಾಮಕಾರಿಯಾಗಿ ಯೋಜನೆ ಅನುಷ್ಠಾನಗೊಳಿಸಲು ಅಧಿಕಾರಿಗಳು ಪ್ರಾಮಾಣಿಕ ಶ್ರಮ ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಸೂಚಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ರಾಜ್ಯದಲ್ಲಿಯೇ ಚಿಕ್ಕಮಗಳೂರು ಜಿಲ್ಲೆಯು ಮೊದಲ ಸ್ಥಾನದಲ್ಲಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಶೇ.95 ರಷ್ಟು ಪ್ರಗತಿ ಸಾಧಿಸಲಾಗಿದ್ದು, ಮುಂದಿನ ದಿನಗಳಲ್ಲಿ ಪರಿಣಾಮಕಾರಿಯಾಗಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ, ಶೇ.100ರಷ್ಟು ಪ್ರಗತಿ ಸಾಧಿಸಲು ಕ್ರಮವಹಿಸುವ ಮೂಲಕ ಮೊದಲ ಸ್ಥಾನ ತಲುಪಬೇಕು. ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಸದಸ್ಯರಾದ ಸೈಯದ್ ಮುದಾಸಿರ್,ಅಬ್ಬುಲ್‌ಸೇರಿದಂತೆತಾಲ್ಲೂಕು ಮಟ್ಟದ ಸಮಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರವಿಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇದ್ದರು.

## ನಗರದಲ್ಲಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸೇವಾಪಡೆವತಿಯಿಂದ ಕನ್ನಡ ರಾಜ್ಯೋತ್ಸವ

» ಚಿತ್ರದುರ್ಗ



ಕನ್ನಡ ರಾಜ್ಯೋತ್ಸವ ಕೇವಲ ನವೆಂಬರ್ ತಿಂಗಳಿಗೆ ಮಾತ್ರ ಸೀಮಿತವಾಗಿರಬಾರದು. ಪ್ರತಿಯೊಬ್ಬರ ದಿನನಿತ್ಯದ ಬದುಕಿನಲ್ಲಿ ಕನ್ನಡ ನಾಡು, ನುಡಿ, ನೆಲ, ಜಲದ ಬಗ್ಗೆ ಅಭಿಮಾನವಿರಬೇಕೆಂದು ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ ತಿಳಿಸಿದರು.

ಮೆಜೆಸ್ಟಿಕ್ ವೃತ್ತದ ಸಮೀಪವಿರುವ ಶ್ರಮಿಜೀವಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸೇವಾಪಡೆ ವತಿಯಿಂದ ಶುಕ್ರವಾರ ನಡೆದ 69 ಕನ್ನಡ ರಾಜ್ಯೋತ್ಸವ, ಉಚಿತ ಆರೋಗ್ಯ ತಪಾಸಣೆ ಹಾಗೂ ಗಿಡನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶರಣರು, ಸಂತರು, ಮಹಾತ್ಮರು, ತಪಸ್ವಿಗಳು, ಪುಣ್ಯ ಪುರುಷರು ಹುಟ್ಟಿರುವ ಈ ನೆಲದಲ್ಲಿ ನಾವುಗಳೆಲ್ಲಾ ಜನ್ಮತಾಳಿರುವುದೇ ಪುಣ್ಯ. ಕನ್ನಡಕ್ಕೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಸಿಕ್ಕಿವೆ. ಎರಡು ಸಾವಿರ ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆಯನ್ನು ಪ್ರತಿಯೊಬ್ಬರು ಪ್ರೀತಿಸಿ ಗೌರವಿಸಬೇಕು. ಕೆಂಪು ಧೈರ್ಯ ಹಾಗೂ ಹಳದಿ ಶಾಂತಿಯ ಸಂಕೇತ. ಕನ್ನಡ ಭಾಷೆಗೆ ಎಲ್ಲಾ ಜಾತಿ ಧರ್ಮದವರನ್ನು ಪ್ರೀತಿಸುವ ತಾಯಿ ಹೃದಯವಿದೆ ಎಂದು ಹೇಳಿದರು.

ಜಿಲ್ಲಾಸ್ಪತ್ರೆ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಮಾತನಾಡಿ ಕಟ್ಟಡ ಕಟ್ಟುವ ಕಾರ್ಮಿಕರು ಶ್ರಮಪಟ್ಟು ದುಡಿಯುವುದರಿಂದ ಆರೋಗ್ಯದ ಕಡೆಗೂ ಹೆಚ್ಚಿನ ಕಾಳಜಿ ವಹಿಸಬೇಕು.

ಹಾಲು, ಮೊಟ್ಟೆ, ತರಕಾರಿ, ಹಣ್ಣು ಹಂಪಲು ಇನ್ನಿತರೆ ಪೌಷ್ಠಿಕಾಂಶ ಆಹಾರಗಳನ್ನು ಸೇವಿಸಬೇಕು. ಬದಲಾದ ಜೀವನ ಶೈಲಿ ಹಾಗೂ ಆಹಾರ ಪದ್ದತಿಯಿಂದ ಎಲ್ಲರೂ ಒಂದಲ್ಲ ಒಂದು ರೀತಿಯ ಆರೋಗ್ಯ ಸಮಸ್ಯೆಯಿಂದ ಬಳಲುವುದು ಸಹಜ. ಉಚಿತ ಆರೋಗ್ಯ ಶಿಬಿರಗಳಲ್ಲಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಹೃದಯಕ್ಕೆ ಸಂಬಂಧಿಸಿದಂತೆ ತಪಾಸಣೆ ನಡೆಸಲಾಗುವುದು. ಸಾರ್ವಜನಿಕರು ಪ್ರಯೋಜನ ಪಡೆದುಕೊಳ್ಳಬೇಕು. ಜಿಲ್ಲಾಸ್ಪತ್ರೆಯಲ್ಲಿ ಈಗ ಎಲ್ಲಾ ರೀತಿಯ ಸೌಲಭ್ಯಗಳು ಬಡ ರೋಗಿಗಳಿಗೆ ಸಿಗುತ್ತದೆ ಎಂದು ಹೇಳಿದರು.

ಮದ್ಯಪಾನ, ಧೂಮಪಾನ ಆರೋಗ್ಯಕ್ಕೆ ಹಾನಿಕರ, ಗುಟ್ಕ, ಪಾನ್‌ಪರಾಗ್‌ನಿಂದ ಕ್ಯಾನ್ಸರ್‌ನಂತ ಕೆಟ್ಟ ರೋಗಕ್ಕೆತುತ್ತಾಗಬೇಕಾಗುತ್ತದೆ. ಅದಕ್ಕಾಗಿ ದುಶ್ಚಟಗಳಿಂದ ದೂರವಿದ್ದು, ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ಕಟ್ಟಡ ಕಾರ್ಮಿಕರಲ್ಲಿ ಡಾ.ರವೀಂದ್ರ ವಿನಂತಿಸಿದರು.

ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ

ನಗರಸಭೆ ಪೌರಾಯುಕ್ತೆ ರೇಣುಕ, ನಗರ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ತಿಪ್ಪೇಸ್ವಾಮಿ, ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ಎ.ಜಾಕಿರ್‌ಹುಸೇನ್, ಎ.ಸಾಧಿಕ್‌ವುಲ್ಲಾ, ಶ್ರಮಜೀವಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸೇವಾಪಡೆರಾಜ್ಯಾಧ್ಯಕ್ಷಮಲ್ಲಿಕಾರ್ಜುನ್(ಪಾರ್ಥ) ಕಾರ್ಯದರ್ಶಿ ಕೆ.ಶಿವಕುಮಾರ್, ಜಿಲ್ಲಾಧ್ಯಕ್ಷ ರವಿಚಂದ್ರಉಪಾಧ್ಯಕ್ಷ ಕೃಷ್ಣಮೂರ್ತಿ, ರತ್ನಮ್ಮ ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ತಾಲ್ಲೂಕು ಅಧ್ಯಕ್ಷೆ ಅಮೀನಾಭಿ, ಜಂಟಿ ಕಾರ್ಯದರ್ಶಿ ಪರ್ವಿನ್ ಸೇರಿದಂತೆ ಜಾನಪದ ಜಾಗೃತಿ ಪರಿಷತ್ ಅಧ್ಯಕ್ಷ ಹೆಚ್.ಪ್ಯಾರೆಜಾನ್, ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಮಾತು ಮತ್ತು ಆಲೋಚನೆಗಳು ಜಗತ್ತನ್ನು ಆಳುತ್ತವೆ: ತಾಂತ್ರಿಕ ವಿಭಾಗದ ಮುಖ್ಯಸ್ಥ ಕೆ.ಕೆ.ಮಣಿ

» ಚಿತ್ರದುರ್ಗ

ಜ್ಞಾನಕ್ಕೆ ಮಿಗಿಲಾದುದು ಯಾವುದೂ ಇಲ್ಲ. ಮಾತುಗಳು ಮತ್ತು ಆಲೋಚನೆಗಳು ಜಗತ್ತನ್ನು ಆಳುತ್ತವೆ ಎಂದು ತಾಂತ್ರಿಕ ವಿಭಾಗದ ಮುಖ್ಯಸ್ಥ ಕೆ.ಕೆ.ಮಣಿ ಹೇಳಿದರು.

ಭಾರತೀಯ ಸಾರ್ವಜನಿಕ ಪ್ರಸಾರ ಸೇವೆ, ಪ್ರಸಾರ ಭಾರತಿ ಆಕಾಶವಾಣಿ ನಿಲಯದಿಂದ ಗುರುವಾರ ನಗರದ ಆಕಾಶವಾಣಿ ನಿಲಯದಲ್ಲಿ ಆಯೋಜಿಸಲಾದ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ ಶೀರ್ಷಿಕೆಯಡಿ 'ಕನ್ನಡ ರಾಜ್ಯಯೋತ್ಸವ ಸಮಾರಂಭ' ಕಾರ್ಯಕ್ರಮದಲ್ಲಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಮಾತು ಮತ್ತು ಆಲೋಚನೆಗಳು ಉದಾತ್ತಗೊಂಡಾಗ ನಮ್ಮ ಚಿಂತನೆಯ ಗುಣಮಟ್ಟ ಕೂಡಾ ಉತ್ತಮಗೊಳ್ಳುತ್ತದೆ. ಕನ್ನಡವನ್ನು ಕಟ್ಟುವ ನೆಲೆಗಟ್ಟಿನಲ್ಲಿ ಆಕಾಶವಾಣಿಯ ನಿರೂಪಕರ ಪಾತ್ರ ಮಹತ್ವದ್ದು. ಹೆಚ್ಚು ಹೆಚ್ಚು ನಾವೀನ್ಯತೆಯೊಂದಿಗೆ ಧ್ವನಿಯ ಮೂಲಕ ಭಾವ ಸಾಧ್ಯತೆಗಳನ್ನು ಶ್ರೋತೃಗಳ ಹೃದಯಕ್ಕೆ ದಾಟಿಸುವ ಪ್ರಯತ್ನ ಮಾಡಬೇಕು ಎಂದರು.

ನಿಲಯದ ಕಾರ್ಯಕ್ರಮದ ಮುಖ್ಯಸ್ಥರಾದ ಎಸ್. ಆರ್. ಭಟ್ ಮಾತನಾಡಿ, ಕನ್ನಡದ ನೆಲ, ಜಲ ಭಾಷೆ ಉಳಿಸಿ ಬೆಳೆಸುವುದರೊಂದಿಗೆ ಮಾಹಿತಿ, ಮನೋರಂಜನೆ, ಸಾಹಿತ್ಯ, ಶಿಕ್ಷಣ, ಕಲೆ ಇವುಗಳನ್ನು ಸ್ಪರ್ಧಾತ್ಮಕವಾದ ಮಾಧ್ಯಮ ಜಗತ್ತಿನಲ್ಲಿ ಇಂದಿಗೂ ಗುಣಾತ್ಮಕ ಒಳನೋಟದೊಂದಿಗೆ ನಿತ್ಯವೂ ಪ್ರಸ್ತುತ ಪಡಿಸುತ್ತಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನಿಲಯದ ಪ್ರಸಾರ ವಿಭಾಗದ ಮುಖ್ಯಸ್ಥರಾದ ಡಿ.ಆರ್.ಶಿವಪ್ರಕಾಶ್ ಮಾತನಾಡಿ, ದೇಶದ ಎಲ್ಲಾ ರಾಜ್ಯಗಳಲ್ಲಿ ಆಕಾಶವಾಣಿಯೂ ವರ್ಷದ 365 ದಿನಗಳ ಕಾಲ ಆಯಾ ರಾಜ್ಯದ ಭಾಷೆ, ನಾಡು, ನುಡಿಗಾಗಿ ಸೇವೆಸಲ್ಲಿಸುತ್ತಿದೆ. ಭಾರತದ ಭಾಷೆ, ಸಂಸ್ಕೃತಿ, ನುಡಿ, ಪರಂಪರೆಯನ್ನು ಈ ನಾಡಿಗೆ ಅರ್ಥಪೂರ್ಣವಾಗಿ ಕಟ್ಟಿಕೊಡುವ ಕೆಲಸ ಮಾಡುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ತಾಂತ್ರಿಕ ವಿಭಾಗದ ಆನಂದಪ್ಪ, ಶಿವಮೂರ್ತಿ, ತ್ಯಾಗರಾಜ್, ದೇವದಾಸ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಸರಳ ವಿಶ್ವಮಾನವತೆಯ ಬದುಕಿಗೆ ಕಾಲಿರಿಸಿದ ನವ ದಂಪತಿಗಳು



**ಹೊಸದುರ್ಗ / ತೀರ್ಥಹಳ್ಳಿ:** ಇತ್ತೀಚಿಗಂತೂ ಆಡಂಬರದ ಮದುವೆಗಳ ಸಂಖ್ಯೆಗಳಿಗೆ ಲೆಕ್ಕವಿಲ್ಲ. ಮದುವೆ ಎಂಬುದು ಎರಡು ಕುಟುಂಬಗಳ ತಂದೆ ತಾಯಿಗಳಿಗೆ ತಿಳಿಸಲಾಗದ ಬಾರ ವರದಕ್ಷಿಣೆ ವರೋಪಚಾರ, ಹಳ್ಳಿಗಳಲ್ಲಿ ಮದುವೆ ಮಾಡುವಂತಿಲ್ಲ ನಗರಗಳ ಕಲ್ಯಾಣ ಮಂಟಪಗಳೆ ಬೇಕು ಒಟ್ಟಾರೆ ಮದುವೆ ಎಂದರೆ ಅದ್ದೂರಿ ಎಂಬಂತಿದೆ ಇಂತಹ ಮದುವೆಗಳ ಮಧ್ಯದಲ್ಲಿಯೂ ಸರಳ ಜೀವನಕ್ಕೆ ಕಾಲಿರಿಸಿ ನವ ಜೀವನದ ಬದುಕು ಕಟ್ಟಿಕೊಂಡಿದ್ದಾರೆ ಈ ದಂಪತಿಗಳು. ಇಂತಹದೊಂದು ಘಟನೆಗೆ ಸಾಕ್ಷಿಯಾದರು ಹೊಸದುರ್ಗ ತಾಲೂಕಿನ ನಾಗಿನಹಳ್ಳಿಯ ಉಷಾ ಹಾಗೂ ಚಿಕ್ಕಮಗಳೂರು ಜಿಲ್ಲೆ ಅಜ್ಜಂಪುರ ತಾಲೂಕಿನ ಹೆಗ್ಗಡಿಹಳ್ಳಿ ಗ್ರಾಮದ ವಕೀಲ ಪಂಪ ಹೆಚ್ ಎನ್, ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲೂಕಿನ ರಾಷ್ಟ್ರಕವಿ ಕುವೆಂಪುರವರ ಪುಣ್ಯಭೂಮಿ ಕುಪ್ಪಳ್ಳಿಯಲ್ಲಿನ ರಾಷ್ಟ್ರಕವಿ ಕುವೆಂಪು ಪ್ರತಿಷ್ಠಾನದ ಹೇಮಾಂಗಣ ಸಭಾ ಮಂಟಪದಲ್ಲಿ ಕುವೆಂಪುರವರ ಆಶಯದಂತೆ ಮಂತ್ರ ಮಾಂಗಲ್ಯ ಎನ್ನುವ ಪರಿಕಲ್ಪನೆಯಲ್ಲಿ ಸುಂದರ ಪ್ರಕೃತಿಯನ್ನೇ ಮಂತ್ರವಾಗಿಸಿಕೊಂಡು ಈ ಜೋಡಿಗಳು ಗುರು ಹಿರಿಯರ ಸಮ್ಮುಖದಲ್ಲಿ ಸತಿಪತಿಗಳಾದರು., ಆಡಂಬರಗಳ ಮದುವೆ ಮಾಡುವ ಜನರು ಈ ಸರಳ ವಿವಾಹ ನೋಡಿ ಕಲಿಯಬೇಕಾದದ್ದು ಬಹಳಷ್ಟಿದೆ.

**ಪ್ರಮುಖ ಸುದ್ದಿ**

# ಭಗೀರಥ ಶ್ರೀಗಳ ಸಂಭ್ರಮದ ಜನ್ಮದಿನೋತ್ಸವ

» ಹೊಸದುರ್ಗ



ತಾಲ್ಲೂಕಿನ ಮಧುರೆಯ ಸಮೀಪದ ಬ್ರಹ್ಮವಿದ್ಯಾನಗರ ದಲ್ಲಿನ ಭಗೀರಥ ಗುರುಪೀಠದಲ್ಲಿ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಅವರ ಜನ್ಮ ದಿನೋತ್ಸವ ಗುರುವಾರ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಜನ್ಮದಿನೋತ್ಸವದ ಅಂಗವಾಗಿ ಬುಧವಾರ ರಾತ್ರಿ ಗಣಹೋಮ, ದೇವತಾರಾಧನೆ ಹಾಗೂ ಮೃತ್ಯುಂಜಯ ಹೋಮಗಳು ನಡೆದವು. ನಂತರ ಹಳೇ ಕುಂದೂರು ಆಂಜನೇಯ ಸ್ವಾಮಿ, ಬಾಗೂರಿನ ಮೈಲಾರಲಿಂಗೇಶ್ವರ ಸ್ವಾಮಿ, ಕೊಂಡಾಪುರದ ಕರಿಯಮ್ಮ, ಕೃಷ್ಣಾಪುರದ ದೇವರುಗಳು ಆಗಮಿಸಿದ್ದವು. ಸಂಜೆ ಪೀಠಕ್ಕೆ ಆಗಮಿಸಿದ್ದ ಚಾಮುಂಡೇಶ್ವರಿ ದೇವತೆಯ ಸಮ್ಮುಖದಲ್ಲಿ ಮಡಿಲಕ್ಕಿ ಶಾಸ್ತ್ರಕ್ಕೆ ಜೋಡಿಸಲಾಯಿತು.

ಗುರುವಾರ ಬೆಳಿಗ್ಗೆಯಿಂದಲೇ ದೇವತಾರಾಧನೆ ನಂತರ ಚಂಡಿಕಾ ಹೋಮ ಧಾರ್ಮಿಕ ವಿಧಿಗಳನ್ವಯ ನಡೆಯಿತು. ನಂತರ 1000 ಕ್ಕೂ ಅಧಿಕ ಮಹಿಳೆಯರಿಗೆ ಬಾಗಿನ ಅರ್ಪಿಸಲಾಯಿತು. ವಿವಿಧ ಮಠಾಧೀಶರುಗಳು ಭಾಗವಹಿಸಿದ್ದರು. ಬೆಂಗಳೂರಿನ ಗದ್ದೇಶ್ ಅವರ ತಂಡದವರ ನೇತೃತ್ವದಲ್ಲಿ ಚಂಡಿಕಾ ಹೋಮ ನಡೆಯಿತು.'ನಾಡಿಗೆ ಒಳ್ಳೆಯದಾಗಲಿ. ಕಲ್ಯಾಣವಾಗಲಿ. ಎಲ್ಲಾ ಜನರ ರೋಗ ರುಜಿನೆಗಳು ದೂರವಾಗಿ, ಮನುಷ್ಯರಿಗೆ ಸಕಲ ಕಾರ್ಯ ಸಿದ್ದಿಸಲಿ. ಮಳೆ ಬೆಳೆ ಚೆನ್ನಾಗಿ ಆಗಿ, ರೈತರು ಸಂತಸ ಪಡಲಿ ಹೀಗೆ ಹತ್ತು ಹಲವು ಉದ್ದೇಶಗಳಿಂದ ಹೋಮ ಹವನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಹೇಳಿದರು.'

'ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಅವರು ಪೀಠ ಅಲಂಕರಿಸಿದ ನಂತರ ಹಲವು ಅಭಿವೃದ್ಧಿ ಕಾರ್ಯಗಳು ನಡೆದಿವೆ. ರಾಷ್ಟ್ರ ಮಟ್ಟದಲ್ಲಿ ಪ್ರಖ್ಯಾತಿ ಪಡೆದಿದೆ. ಉಪ್ಪಾರ ಸಮಾಜಕ್ಕೆ ಮಾತ್ರ ಸೀಮಿತವಾಗಿರದೆವಿಶ್ವಮಾನವರೆನಿಸಿದ್ದಾರೆ. ಅವರ ತತ್ವಾದರ್ಶಗಳಿಂದ ಸಮಾಜಕ್ಕೆ ಒಳಿತಾಗಲಿದೆ ಎಂದು ಮಾದಾರ ಚೆನ್ನಯ್ಯ ಗುರುಪೀಠದ ಮಾದಾರ ಚೆನ್ನಯ್ಯ ಸ್ವಾಮೀಜಿ ಹೇಳಿದರು.'

'ಭಗೀರಥ ಪೀಠದ ಗುರುಗಳು ಜನ್ಮದಿನದ ಸಂದರ್ಭದಲ್ಲಿ ಮಡಿಲಕ್ಕಿ ನೀಡುತ್ತಿರುವುದು ಸಂತಸ ತಂದಿದೆ. ಭಗೀರಥ ಮಹರ್ಷಿಗಳು ಗಂಗೆಯನ್ನು ಭೂಮಿಗೆ ಹರಿಸಿದರು. ಒಬ್ಬ ಹೆಣ್ಣು ಒಂದು ನದಿಗೆ ಸಮಾನ. ಹಾಗಾಗಿ ಸಾವಿರಾರು ಮಹಿಳೆಯರಿಗೆ ಶ್ರೀಗಳು ಬಾಗಿನ ವಿತರಿಸುತ್ತಿದ್ದಾರೆ ಸಂನ್ಯಾಸಿಗಳ ಬದುಕು ದೀಪದಂತೆ ತಾನು ಉರಿದು ಸಮಾಜಕ್ಕೆ ಬೆಳಕು ನೀಡುತ್ತಿದೆ ಎಂದು ವಚನಾನಂದ ಸ್ವಾಮೀಜಿ ಹೇಳಿದರು.'

ಈ ವೇಳೆ ಕನಕಧಾಮದ ಈಶ್ವರಾನಂದಪುರಿ ಸ್ವಾಮೀಜಿ, ಗದ್ದುಗೇಶ್ವರ ಸ್ವಾಮೀಜಿ, ಹನುಮಂತನಾಥ ಸ್ವಾಮೀಜಿ, ಶಿವಲಿಂಗಾನಂದ ಸ್ವಾಮೀಜಿ, ಕೃಷ್ಣಯಾದವಾನಂದ ಸ್ವಾಮೀಜಿ , ಜ್ಞಾನಾನಂದಪುರಿ ಸ್ವಾಮೀಜಿ, ಮಲ್ಲಿಕಾರ್ಜುನ ಸ್ವಾಮೀಜಿ, ಅನ್ನಪೂರ್ಣೇಶ್ವರಿ ಕ್ಷೇತ್ರದ ಮಹಾಲಿಂಗಸ್ವಾಮಿ, ಅಭಿನವ ಧರಣೇಶ್ವರ ಸ್ವಾಮೀಜಿ, ಮುರುಳಿಧರ ಸ್ವಾಮೀಜಿ, ಮಹಾದೇವಮ್ಮ ತಾಯಿ, ಸಾಗರಾನಂದ ಸ್ವಾಮೀಜಿ, ಮುರುಗೇಶ್ ಸ್ವಾಮೀಜಿ, ಮಹಾಂತ ಸ್ವಾಮೀಜಿ, ಮಡಿವಾಳ ಮಾಚಿದೇವ ಸ್ವಾಮೀಜಿ, ಶಾಸಕ ಬಿ.ಜಿ. ಗೋವಿಂದಪ್ಪ, ಯೋಗ ವಿಸ್ಮಯ ಟ್ರಸ್ಟ್ ನ ಅನಂತ್ ಜೀ, ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ಸೇರಿದಂತೆ ವಿವಿಧ ಮಠಾಧೀಶರು, ಸಮಾಜದ ಮುಖಂಡರಿದ್ದರು.

## ಫಾಸ್ಟ್ ನ್ಯೂಸ್

# ನಗರದಲ್ಲಿ ಚಿತ್ರಕಲಾ ಪ್ರದರ್ಶನಕ್ಕೆ ಚಾಲನೆ



» **ಚಿತ್ರದುರ್ಗ**

ಮಾನವನ ಮನಸ್ಸು ಕೆಟ್ಟಾಗ ಸಂಗೀತವನ್ನು ಆಲಿಸುವುದು, ಚಿತ್ರವನ್ನು ಬಿಡಿಸುವುದು ಮಾಡಿದಾಗ ಮನಸ್ಸು ಹಗುರವಾಗುತ್ತದೆ ಇಂತಹ ಶಕ್ತಿ ಸಂಗೀತ ಮತ್ತು ಚಿತ್ರಕಲೆಯಲ್ಲಿ ಇದೆ ಎಂದು ಶರಣ ಸಾಹಿತ್ಯ ಪರಿಷತ್‌ನ ರಾಜ್ಯ ಉಪಾಧ್ಯಕ್ಷರಾದ ಡಾ.ಕೆ.ಎಂ.ವಿರೇಶ್ ತಿಳಿಸಿದರು.ಕಲಾ ಚೈತನ್ಯ ಸೇವಾ ಸಂಸ್ಥೆ, ಸಾಂಸ್ಕೃತಿಕ ಕಲಾ ಸಂಘ ಚಿತ್ರದುರ್ಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ 69ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ನಗರದ ಪತ್ರಿಕಾ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಚಿತ್ರಕಲಾ ಪ್ರದರ್ಶನ ಹಾಗೂ ಗಾನ ಮತ್ತು ಚಿತ್ರ ಸಂಗಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಲಾವಿದರನ್ನು ಗೌರವಿಸುವ ಕಾರ್ಯವನ್ನು ಮಾಡಬೇಕಿದೆ ಅವರ ಕಲೆಗೆ ಬೆಲೆಯನ್ನು ಕಟ್ಟಲಾಗದು ಆದರೆ ಅದನ್ನು ಪ್ರೋತ್ಸಾಹಿಸುವ ಕಾರ್ಯವನ್ನು ಎಲ್ಲರು ಮಾಡಬೇಕಿದೆ. ಈ ಚಿತ್ರಕಲಾವಿದರಲ್ಲಿ ಹಲವಾರು ಜನ ಉನ್ನತವಾದ ಶಿಕ್ಷಣವನ್ನು ಪಡೆದವರು ಇದ್ದಾರೆ ಅವರು ಸಹಾ ತಮ್ಮ ಬಿಡುವಿನ ವೇಳೆಯಲ್ಲಿ ಚಿತ್ರಕಲೆಯನ್ನು ಮೈಗೂಡಿಸಿಕೊಂಡು ಅದರಲ್ಲಿ ತಲ್ಲೀನರಾಗಿದ್ದಾರೆ, ಇದರಿಂದ ಅವರಿಗೆ ನೆಮ್ಮದಿ ಶಾಂತಿ ಸಿಗುತ್ತದೆ ಎಂದರು.ಮಾನವನಾದವನಿಗೆ ತನ್ನ ಜೀವನದಲ್ಲಿ ಕಲಾತ್ಮಕವಾದ ಜೀವನವನ್ನು ರೂಪಿಸಿಕೊಳ್ಳದಿದ್ದರೆ ಜೀವನೇ ಇಲ್ಲ ಎನ್ನುವಮರಾಗುತ್ತದೆ. ಮಾನವರಾದ ಮೇಲೆ ತಮ್ಮ ಬದುಕಿನಲ್ಲಿ ಯಾವುದಾರೊಂದು ಕಲೆಯನ್ನು ಆಳವಡಿಸಿಕೊಳ್ಳಬೇಕಿದೆ, ಸಂಗೀತ, ನಾಟ್ಯ, ಚಿತ್ರಕಲೆ, ಭರತನಾಟ್ಯ, ಓದುವುದು, ಬರೆಯುವುದು, ಸೇರಿದಂತೆ ಇತರೆ ಹವ್ಯಾಸಗಳನ್ನು ನಮ್ಮ ಬದುಕಿನಲ್ಲಿ ಇರಬೇಕಿದೆ, ಇದ್ದಾಗ ಮಾತ್ರ ನಮ್ಮ ಬದುಕು ಹಸನಾಗಲು ಸಾಧ್ಯವಿದೆ ಎಂದ ಅವರು, ಮುಂದಿನ ದಿನದಲ್ಲಿ ಚಿತ್ರದುರ್ಗದಲ್ಲಿ ಆಖಿಲ ಭಾರತ ಶರಣ ಪರಿಷತ್ ವತಿಯಿಂದ ಸಮ್ಮೇಳನವನ್ನು ಆಯೋಜಿಸಲಾಗುವುದು ಮುರು ದಿನಗಳ ಕಾಲ ನಡೆಯುವ ಈ ಸಮ್ಮೇಳನದಲ್ಲಿ ಚಿತ್ರಕಲೆಯನ್ನು ಪ್ರದರ್ಶನ ಮಾಡಲು ಅವಕಾಶವನ್ನು ಕಲ್ಪಿಸಿಕೊಡಲಾಗುವುದು ಎಂದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ದಿನೇಶ್ ಗೌಡಗೆರೆ ಮಾತನಾಡಿ, ಪ್ರತಿಭೆ ಯಾರ ಸೋತ್ತು ಅಲ್ಲ ಅದು ಸಾಧಕನ ಸೋತ್ತಾಗಿದೆ. ಇದಕ್ಕೆ ಸತತವಾದ ಪ್ರಯತ್ನ ಬೇಕಿದೆ ಪ್ರಯತ್ನದಿಂದ ಮಾತ್ರ ಯಶಸ್ಸು ಸಿಗಲು ಸಾಧ್ಯವಿದೆ. ನನ್ನ ಅವಧಿಯಲ್ಲಿ ಇಂತಹ ಕಾರ್ಯಕ್ರಮಗಳಿಗೆ ಸದಾ ಪ್ರೋತ್ಸಾಹ ನೀಡಲಾಗುವುದೆಂದು ತಿಳಿಸಿದರು.ರಾಜ್ಯ ಲಲಿತಾ ಕಲಾ ಆಕಾಡೆಮಿಯ ಸದಸ್ಯರಾದ ಸಿ.ಕಣ್ಮೇಶ್ ಮಾತನಾಡಿ, ಯುವ ಕಲಾವಿದರನ್ನು ಗುರುತಿಸಿ ಅವರಿಗೆ ಪ್ರೋತ್ಸಾಹ ನೀಡುವುದು ಇಂದಿನ ದಿನಮಾನದಲ್ಲಿ ಅಗತ್ಯವಾಗಿದೆ. ಕೈಯಲ್ಲಿ ಕಲೆ ಇದೆ ಆದರೆ ಅದನ್ನು ಬೇರೆಯವರಿಗೆ ತೋರಿಸಲು ಅಗತ್ಯವಾದ ವೇದಿಕೆ ಇಲ್ಲವಾಗಿದೆ ಇಂತಹರಿಗೆ ಈ ರೀತಿಯ ಕಾರ್ಯಕ್ರಮಗಳಲ್ಲಿ ಅವಕಾಶ ನೀಡುವುದರಿಂದ ಅವರಿಗೂ ಸಹಾ ಸಹಾಯವಾಗುತ್ತದೆ ಎಂದರು. ಕಲಾ ಚೈತನ್ಯ ಸೇವಾ ಸಂಸ್ಥೆಯ ಕಾರ್ಯದರ್ಶಿ ನಾಗರಾಜ್ ಬೇದ್ರೇ ಮಾತನಾಡಿ, ನಮ್ಮ ಚಿತ್ರದುರ್ಗದಲ್ಲಿ ಹಲವಾರು ಜನ ಚಿತ್ರಕಲಾವಿದರು ಇದ್ದಾರೆ ಅವರಲ್ಲಿ ಪ್ರತಿಭೆ ಇದೆ ಆದರೆ ಅದನ್ನು ಹೊರ ಹಾಕುವ ಕೆಲಸವಾಗುತ್ತಿಲ್ಲ ತಾವು ಬರೆದ ಚಿತ್ರವನ್ನು ಎಲ್ಲಿ ಪ್ರದರ್ಶನ ಮಾಡಬೇಕೆಂದು ತಿಳಿಯದೆ ಸುಮ್ಮನಿದ್ದಾರೆ ಇಂತಹರಿಗೆ ಒಂದು ಆರ್ಟ್ ಗ್ಯಾಲರಿಯನ್ನು ಸರ್ಕಾರದವತಿಯಿಂದ ನಿರ್ಮಾಣ ಮಾಡಿಕೊಡಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದರು. ಕಾರ್ಯಕ್ರಮವನ್ನು ವೈದ್ಯರಾದ ಡಾ.ಬಿ.ಮಲ್ಲಿಕಾರ್ಜನ್ ಕೀರ್ತಿ, ವಾಣಿಜ್ಯೋದ್ಯಮಿಗಳಾದ ಇಕ್ಬಾಲ್ ಹುಸೇನ್, ಬಾಪೂಜಿ ಬಿಎಡ್.ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಜಯಲಕ್ಷ್ಮೀ, ಗೋಪಾಲ್‌ರಾವ್ ಜಾಧವ್, ಸೂರ್ಯ ಪ್ರಕಾಶ್ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಚಿತ್ರಕಲಾವಿದರಾದ ಚಿತ್ರದುರ್ಗದ ನಾಗರಾಜ್ ಬೇದ್ರೇ, ನವೀನ್ ಬೇದ್ರೇ, ಅಮೂಲ್ಯ, ಜವಳಿ ಶಾಂತಕುಮಾರ್, ಮಾರುತಿ, ಪ್ರಜ್ಞಾ ಮಂಜುನಾಥ್ ಹಾಗೂ ಹಿರಿಯೂರಿನ ಸುಷ್ಮಾ ರವರ ಚಿತ್ರಕಲಾಗಳ ಪ್ರದರ್ಶನಗೊಂಡವು.ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆಯನ್ನು ಮಾಡಿದ ಗಣ್ಯರನ್ನು ಸನ್ಮಾನಿಸ ಲಾಯಿತು. ಗಾನ ಮತ್ತು ಚಿತ್ರ ಸಂಗಮ ಕಾರ್ಯಕ್ರಮವನ್ನು ಚಿತ್ರಕಲಾವಿದರಾದ ಎಸ್.ಸತೀಶ್ ರಾವ್ ಹಾಗೂ ಸಂಗೀತ ಶಿಕ್ಷಕರಾದ ಅಂಜನಿ ನಡೆಸಿಕೊಟ್ಟರು.


# ಮಹಿಳೆ ಕಾಣೆ

» **ಚಿತ್ರದುರ್ಗ**

ತಾಲ್ಲೂಕಿನ ಜಿ.ಆರ್.ಹಳ್ಳಿ ಗ್ರಾಮದ ರಕ್ಷ ಗಂಡ ಪರಶುರಾಮ (ಸು.20 ವರ್ಷ) ಎಂಬ ಮಹಿಳೆ ಕಾಣೆಯಾದ ಕುರಿತು ನ.26ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ರಕ್ಷ ಅವರು ಸು.4.5 ಅಡಿ ಎತ್ತರ, ದುಂಡು ಮುಖ, ದುಂಡು ಮೂಗು, ಸಾಧಾರಣ ಮೈಕಟ್ಟು, 14 ಇಂಚು ಉದ್ದದ ಕಪ್ಪು ಕೂದಲು, ಗೋದಿ ಮೈ ಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು.

# ರಂಗಭೂಮಿಯಿಂದ ಕುಲಚರಿತೆಯತ್ತ ಪೆದ್ದನಾಯಕರ ತಿಪ್ಪೇಸ್ವಾಮಿ






ಅದೊಂದು ಪುಸ್ತಕ ಬಿಡುಗಡೆಯಕಾರ್ಯಕ್ರಮ. ಪುಸ್ತಕವನ್ನು ಒಂದು ಬುಟ್ಟಿಯಲ್ಲಿಟ್ಟು ಮೆರವಣಿಗೆ ಮಾಡುತ್ತಾ ಬರಲಾಗಿತ್ತು. ಉರುಮೆ ವಾದ್ಯಗಳ ಪೋತರಾಜರ ಕುಣಿತಗಳ ಜತೆ ಮೆರವಣಿಗೆಯಲ್ಲಿ ಪುಸ್ತಕವನ್ನು ವೇದಿಕೆಗೆ ತರಲಾಯಿತು. ವೇದಿಕೆಯಲ್ಲಿ ಮ್ಯಾಸಬೇಡರ ಕಿಲಾರಿಗಳು, ಕಟ್ಟೆಮನೆಗಳ ಮುಖ್ಯಸ್ಥರು, ಪೂಜಾರಿಗಳು, ದಾಸಯ್ಯಗಳು, ದೊರೆಗಳು ಕಂಬಳಿ ಹೊದ್ದು ಮ್ಯಾಸ ಬುಡಕಟ್ಟಿನ ಮೂಲ ವೇಷದಲ್ಲಿ ವೇದಿಕೆಯ ಮೇಲಿದ್ದರು. ಈ ಕಾರ್ಯಕ್ರಮ ನಡೆದದ್ದು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆಯ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ. ಬಿಡುಗಡೆಯಾದ ಪುಸ್ತಕ ಪೆದ್ದನಾಯಕ ತಿಪ್ಪೇಸ್ವಾಮಿ ಅವರು ರಚಿಸಿದ ಸಂಶೋಧನ ಕೃತಿ 'ಮ್ಯಾಸ ಬೇಡರ ಮೌಖಿಕ ಕಥನಗಳು' ಈ ಕಾರ್ಯಕ್ರಮಕ್ಕೆ ಐದುನೂರಕ್ಕೂ ಹೆಚ್ಚು ಜನರು ಸೇರಿದ್ದರು. ಕಲ್ಯಾಣ ಮಂಟಪವಾದ ಕಾರಣ ಯಾರದ್ದೋ ಮದುವೆ ಇರಬೇಕು ಅಂದುಕೊಂಡವರೇ ಹೆಚ್ಚು. ಚಳ್ಳಕೆರೆ ಶಾಸಕರಾದ ಟಿ.ರಘುಮೂರ್ತಿ ಅವರು ಪುಸ್ತಕ ಬಿಡುಗಡೆ ಮಾಡಿದರು. ಡಾ.ಎಸ್.ಎಂ.ಮುತ್ತಯ್ಯ ಪುಸ್ತಕ ಕುರಿತು ಮಾತನಾಡಿದರು. ಮದುವೆ ಊಟದಂತೆ ಪುಸ್ತಕ ಬಿಡುಗಡೆಗೂ ಮದುವೆ ಊಟವೇ ಇತ್ತು. ಹೀಗೆ ಸಮುದಾಯದ ಜನಜಾತ್ರೆಯ ಮದ್ಯೆ ಮ್ಯಾಸ ಬೇಡರ ಕುಲಕಥನವೊಂದು ಬಿಡುಗಡೆಯಾಯಿತು.

ಇದು ಒಂದು ಸಮುದಾಯ ತನ್ನದೇ ಸಮುದಾಯದ ಸಂಶೋಧನ ಕೃತಿಗೆ ತೋರಿದ ಸಂಭ್ರಮದ ಒಂದು ವಿಶಿಷ್ಟ ಕ್ರಮವಾಗಿತ್ತು. ಈ ಹಿಂದೆ ಮ್ಯಾಸಬೇಡರ ಕುರಿತು ಬ್ರಿಟಿಷ್ ಮಿಷನರಿಗಳುಉಲ್ಲೇಖಿಸಿದ್ದಾರೆ,ಕರಿಶೆಟ್ಟಿರುದ್ರಪ್ಪ, ಕೃಷ್ಣಮೂರ್ತಿ ಹನೂರು, ಎ.ಎಸ್.ಪ್ರಭಾಕರ್, ವಿರೂಪಾಕ್ಷ ಪೂಜಾರಹಳ್ಳಿ ಮೊದಲಾದವರ ಅಧ್ಯಯನಕ್ಕೆ ಸಿಗದ ಸಮುದಾಯದ ಈ ಬಗೆಯ ಸ್ಪಂದನ ಈ ಕೃತಿಗೆ ಸಿಕ್ಕಿದ್ದೇಕೆ? ಎಂದು ನನಗೆ ಅಚ್ಚರಿಯಾಯ್ತು. ಆ ನಂತರ ನಾನು ಪಿ.ತಿಪ್ಪೇಸ್ವಾಮಿ ಅವರನ್ನು ಮಾತಾಡಿಸುತ್ತಾ ಹೋದಂತೆ ಅವರ ಸಮುದಾಯವನ್ನು ರಂಗಭೂಮಿ ಮೂಲಕ ಅರಿವು ಮೂಡಿಸಿದ ಕ್ರಮ, ಸಮುದಾಯದ ಎಲ್ಲಾ ಹಿರಿಯರಿಂದ ಮಾಹಿತಿ ಪಡೆದು ಅದನ್ನೊಂದು ಕಥನವನ್ನಾಗಿ ಕಟ್ಟಿದ ಪರಿ ಎರಡೂ ಸಮುದಾಯದ ಪ್ರೀತಿಗೆ ಕಾರಣವಾಗಿದ್ದವು.

ಸಮುದಾಯಗಳ ಅಧ್ಯಯನ ಸಂಶೋಧನೆಗೆ ಕ್ಷೇತ್ರಕಾರ್ಯಕ್ಕೆ ಹೋದಾಗ ಆಯಾ ಸಮುದಾಯದ ಹಿರಿಯರು ಅಧ್ಯಯನಕಾರರಿಗೆ ವಕ್ತೃಗಳಾಗಿಸಂಪರ್ಕಕ್ಕೆಬರುತ್ತಾರೆ.ಇವರುಗಳನ್ನು ಮಾಹಿತಿದಾರರು, ತಿಳುವಳಿಕೆದಾರರು, ತಿಳುವಳಿಕೆ ಕೊಟ್ಟವರು ಹೀಗೆ ಬೇರೆ ಬೇರೆ ಹೆಸರುಗಳಲ್ಲಿ ಸಂಶೋಧನೆಯ ಕೊನೆಯಲ್ಲಿ ಗುರುತಿಸುತ್ತೇವೆ. ಹೀಗೆ ಸಮುದಾಯಗಳ ಬಗ್ಗೆ ಅಪಾರ ತಿಳುವಳಿಕೆ ಇದ್ದವರೇ ಅದನ್ನೆಲ್ಲಾ ದಾಖಲಿಸಿ ಪುಸ್ತಕ ಪ್ರಕಟಿಸಿದರೆ? ಪಿ.ತಿಪ್ಪೇಸ್ವಾಮಿ ಅವರ ಸಂಶೋಧನೆಯೂ ಈ ಬಗೆಯದು. ಅವರು ಯಾವ ವಿಶ್ವವಿದ್ಯಾಲಯದ ಪಿಹೆಚ್.ಡಿ ಗಾಗಿ ಸಂಶೋಧನೆ ಮಾಡಲಿಲ್ಲ. ಮತ್ತಾವುದೋ ಪದವಿಗಾಗಿ ಕೃತಿಯನ್ನು ಸಿದ್ಧಪಡಿಸಲಿಲ್ಲ. ನಮ್ಮ ಸಮುದಾಯದ ಕಥೆಗಳ ಚರಿತ್ರೆಯನ್ನು ಮುಂದಿನ ತಲೆಮಾರಿಗೆ ಉಳಿಸಬೇಕೆಂದು ತಿಪ್ಪೇಸ್ವಾಮಿಯವರುಸಮುದಾಯದಹಿರಿಯರು ಹೇಳಿದ್ದನ್ನೆಲ್ಲಾ ಒಪ್ಪವಾಗಿ ಬರೆದಿಟ್ಟಿದ್ದರು. ಜಾನಪದ ವಿದ್ವಾಂಸರಾದ ಮೀರಸಾಬಿಹಳ್ಳಿ ಶಿವಣ್ಣ ಇದಕ್ಕೊಂದು ಪುಸ್ತಕ ರೂಪ ನೀಡಿ ಸಿ.ವಿ.ಜಿ.ಪ್ರಕಾಶನದಿಂದ ಪ್ರಕಟಿಸಿದರು. ಇದಿಷ್ಟು ಈ ಪುಸ್ತಕದ ಕಥೆ.

ಚಳ್ಳಕೆರೆಯ ಹಳೆ ಟೌನ್‌ವಾಸಿ ವೀರಣ್ಣ ಮತ್ತು ವೀರಮ್ಮನವರ ಏಕೈಕ ಪುತ್ರನಾಗಿ 1946 ರಲ್ಲಿ ಜನಿಸಿದ, ಪಿಟಿಎಸ್ ಎಂದೇ ಈ ಭಾಗದಲ್ಲಿ ಜನಪ್ರಿಯರಾಗಿರುವ 78 ವರ್ಷದ ಪಿ.ತಿಪ್ಪೇಸ್ವಾಮಿ ಚಳ್ಳಕೆರೆಯಲ್ಲಿ ನೆಲೆಸಿದ್ದಾರೆ. ಹೈಸ್ಕೂಲ್ ಮುಖ್ಯಗುರುಗಳಾಗಿ (1973 ರಿಂದ 2004) ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ನಿವೃತ್ತಿ ಹೊಂದಿದ ನಂತರ ಹೀಗೆ ಸಮುದಾಯದ ಚರಿತ್ರೆ ಕಟ್ಟುವ ಕೆಲಸಕ್ಕೆ ಪ್ರವೇಶ ಪಡೆದದ್ದು ಕುತೂಹಲಕಾರಿಯಾಗಿದೆ. ತಿಪ್ಪೇಸ್ವಾಮಿ ಬಿ.ಎ ಬಿಇಡಿ ಮಾಡಿದ ನಂತರ ಚಳ್ಳಕೆರೆಗೆ ಹೊಂದಿಕೊಂಡಂತಿರುವ ಕಾಟಪ್ಪನಹಟ್ಟಿಯ ಕಾಟಮಲಿಂಗೇಶ್ವರ ಅನುದಾನಿತ ಪ್ರೌಢಶಾಲೆಯಲ್ಲಿ ಶಿಕ್ಷಕರಾದರು. ಹೀಗೆ ಶಿಕ್ಷಕರಾಗುವ ಮೊದಲೆ 1968 ರಲ್ಲಿ 'ಭಕ್ತ ಸುಧನ್ವ' ಪೌರಾಣಿಕ ನಾಟಕದಲ್ಲಿ ನಾರದನ ಪಾತ್ರ ಮಾಡಿ ಮೆಚ್ಚುಗೆ ಗಳಿಸಿದ್ದರು. ಇದಕ್ಕೂ ಮೊದಲೆ ಹಾಡುಗಾರಿಕೆಯಲ್ಲಿ ತೀವ್ರ ಆಸಕ್ತಿ ಹೊಂದಿದ್ದ ಪಿಟಿಎಸ್ ಬಿ.ಗುರುಸಿದ್ದಪ್ಪ ಎನ್ನುವ ಸಂಗೀತ ವಿದ್ವಾಂಸರ ಬಳಿ ಜೂನಿಯರ್ ಸಂಗೀತ ಕಲಿಯುತ್ತಾರೆ. ಮುಂದೆ 'ಬೃಂದಾವನ ವಾದ್ಯಗೋಷ್ಠಿ' ಎಂಬ ಆರ್ಕೆಸ್ಟ್ರಾ ಆರಂಭಿಸುತ್ತಾರೆ. 1975 ರಲ್ಲಿ 'ಕಾಟಮಲಿಂಗೇಶ್ವರ ನಾಟಕ ಸಂಘ' ಕಟ್ಟಿ 'ನಾಟ್ಯರಾಣಿ' ಎನ್ನುವ ನಾಟಕ ಆಡುತ್ತಾರೆ. ಈ ಬಳಿಕ ಹೈಸ್ಕೂಲ್ ಶಿಕ್ಷಕರಾಗಿಯೂ ಹಗಲೊತ್ತು ಶಾಲೆ ರಾತ್ರಿ ನಾಟಕ ನಿರ್ದೇಶನ ಹೀಗೆ ಎಂಬತ್ತು ತೊಂಬತ್ತರ ದಶಕದಲ್ಲಿ ನಿರಂತರ ರಂಗಭೂಮಿಯಲ್ಲಿ ಹಗಲಿರುಳು ದುಡಿಯುತ್ತಾರೆ.

'ಧನಿಕರ ದೌಜ್ಯನ್ಯ' 'ಆಶಾಲತಾ' 'ಅಣ್ಣತಂಗಿ' 'ಗೌರಿ ಗೆದ್ದಳು' 'ಗೌಡ್ರಗದ್ಲ' ಮೊದಲಾದ ನೂರಾರು ಸಾಮಾಜಿಕ ನಾಟಕಗಳಿಗೆ ನಾಟಕ ನಿರ್ದೇಶನದ ಜತೆ ಸಂಗೀತ ನಿರ್ದೇಶನವನ್ನೂ ಮಾಡಿದರು. ನಿಧಾನಕ್ಕೆ ಸಾಮಾಜಿಕ ನಾಟಕಗಳಿಂದ ಪಿಟಿಎಸ್ ಅವರು ಪೌರಾಣಿಕ ಬಯಲಾಟ ದೊಡ್ಡಾಟಗಳಿಗೆ ರೂಪಾಂತರ ಹೊಂದಿದರು. ಮನ್ನೂರು ಸುಭದ್ರಮ್ಮ, ಮರಿಯಮ್ಮನಹಳ್ಳಿ ನಾಗರತ್ನಮ್ಮ, ಕೂಡ್ಲಿಗಿಯ ದುಶ್ಶೀಲೆ, ಪದ್ಮ ಮೊದಲಾದವರನ್ನು ಹೆಣ್ಣು ಪಾತ್ರಕ್ಕೆ ಕರೆಯಿಸಿ ಪೌರಾಣಿಕ ನಾಟಕಗಳಿಗೆ ಒಂದು ಹೊಸ ಸ್ಪರ್ಶ ನೀಡಿದರು. ಹಿನ್ನೆಲೆ ಗಾಯಕರಿಂದ ಹಾಡಿಸುವ ಹೊಸ ಬಗೆಯನ್ನು ಪ್ರಾರಂಭಿಸಿದರು. ಹೀಗೆ ರಾಮಾಯಣ ಮಹಾಭಾರತದಕತೆಗಳನ್ನುನಿರ್ದೇಶನಮಾಡಿದ ಪಿಟಿಎಸ್ ಅವರಿಗೆ ನಮ್ಮದೇ ಸಮುದಾಯದ ಚರಿತ್ರೆಯನ್ನು ಯಾಕೆ ನಾಟಕಕ್ಕೆ ತರಬಾರದು ಎಂದು ಯೋಚಿಸಿದರು. ಇದರ ಫಲವೆ 1992 ರಲ್ಲಿ ಮರಡಿಹಳ್ಳಿ ಸೀತಾರಾಮರೆಡ್ಡಿ ಅವರಿಂದ ಚಿತ್ರದುರ್ಗ ಚರಿತ್ರೆಯ 'ರಾಜಾ ವೀರ ಮದಕರಿ ನಾಯಕ' ನಾಟಕ ಬರೆಯಿಸಿ, ನಿರ್ದೇಶನ ಮಾಡಿ ಆಡಿಸಿದರು. ಮದಕರಿ ನಾಯಕ ನಾಟಕ ನೂರಾರು ಪ್ರಯೋಗಗಳೊಂದಿಗೆ ಬಹಳ ಪ್ರಸಿದ್ಧಿ ಪಡೆಯಿತು. ರಾಜಧಾನಿ ದೆಹಲಿಯಲ್ಲಿಯೂ ಪ್ರದರ್ಶನ ಕಂಡಿತು. ಮುಂದುವರಿದ ಮ್ಯಾಸಬೇಡರ ಕುಲದ ವೀರರ ಬಗೆಗೆ ನಾಟಕ ಮಾಡಬೇಕು ಎಂದು ಸಮುದಾಯದ ಕುಲ ಕಥನಗಳನ್ನು ಸಂಗ್ರಹಿಸುವ ಕೆಲಸ ಶುರುಮಾಡಿದರು. ಇದರ ಪರಿಣಾಮವಾಗಿ ಕಾಲುವೇಹಳ್ಳಿ ಗಾದಿರಪ್ಪ ಅವರಿಂದ 'ಜಗಲೂರು ಪಾಪನಾಯ್ಕ' ಅಥವಾ 'ಜಗಳೂರಜ್ಜ' ಮತ್ತು 'ಗಾದರಿ ಪಾಲನಾಯಕ' ನ ಕುರಿತ ನಾಟಕ ಬರೆಸುತ್ತಾರೆ. ಇದರಲ್ಲಿ ಜಗಲೂರಜ್ಜನ ನಾಟಕ ಮಾಡಿ ನಿರ್ದೇಶನ ಮಾಡುತ್ತಾರೆ. ಆದರೆ ಇನ್ನೂ 'ಗಾದರಿ ಪಾಲನಾಯಕ' ನಾಟಕವನ್ನು ಆಡಿಸಲು ಆಗಿಲ್ಲ.

ಕನ್ನಡದ ಬಹಳ ಪ್ರಸಿದ್ಧ ರಂಗನಿರ್ದೇಶಕರಾಗಿದ್ದ ಸಿ.ಜಿ.ಕೃಷ್ಣಕುಮಾರ್ (ಸಿಜಿಕೆ) ಅವರು ಪಿಟಿಎಸ್ ಅವರ ದೊಡ್ಡಪ್ಪನ ಮಗ. ನಾಟಕ ಕುರಿತಂತೆ ಅವರ ಜತೆ ಚರ್ಚೆ ಸಂವಾದ ಮಾತುಕತೆ ಎಲ್ಲಾ ನಡೆಯುತ್ತಿತ್ತು. ಆದರೆ ಸಿಜಿಕೆ ನಾಟಕದ ಪಯಣಕ್ಕೂ ಪಿಟಿಎಸ್ ಅವರ ರಂಗಭೂಮಿ ಪಯಣಕ್ಕೂ ವ್ಯತ್ಯಾಸವಿತ್ತು. ಚಳ್ಳಕೆರೆ ಭಾಗದ ಸೂರನಾಯಕ, ಕಾಟಮಲಿಂಗಯ್ಯ, ಸೂರೆಗೌಡ, ಶ್ರೀನಿವಾಸ, ಗೋಪಾಲನಾಯ್ಕ, ಗುಂಡಣ್ಣ, ವಿ.ಬಿ.ಪಾಲನಾಯಕ, ವಿಜಯಕುಮಾರ್, ಕಂಚಕಾರ ಬೋರಯ್ಯ, ಸಲೀಂ ಜಾವೇದ್ ಮೊದಲಾದ ನೂರಾರು ಕಲಾವಿದರನ್ನು ಪಿಟಿಎಸ್ ಬೆಳೆಸಿದರು. ಈ ಎಲ್ಲಾ ಕಲಾವಿದರಿಗೂ ಇವರೇ ಮುಂದೆ ನಿಂತು ಕಲಾವಿದರಿಗೆ ಸಿಗುವ ಮಾಶಾಸನವನ್ನೂ ಮಾಡಿಸಿ ಅವರ ಬದುಕಿಗೆ ನೆರವಾದರು.

ಪಿಟಿಎಸ್ ಅವರು ಈ ವರ್ಷದ ರಾಜ್ಯೋತ್ಸವ ಪ್ರಶಸ್ತಿಯ ಆಯ್ಕೆ ಕಮಿಟಿಯ ಸದಸ್ಯರಾಗಿದ್ದರು. ಇವರ ಸಾಧನೆ ಗುರುತಿಸಿ ಕರ್ನಾಟಕದ ಸರಕಾರ 2023 ರ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿದೆ. ಇವರ ಗ್ರಾಮೀಣ ರಂಗಭೂಮಿಯ ಸೇವೆಯನ್ನು ಗುರುತಿಸಿ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ (2001) ನೀಡಿ ಗೌರವಿಸಿದೆ. ಹಾಗೂ ನಾಟಕ ಆಕಾಡೆಮಿಯ ಸದಸ್ಯತ್ವ (2014) ನೀಡಿ ರಂಗಕಲಾವಿದರ ಸೇವೆ ಮಾಡಲು, ಚಿತ್ರದುರ್ಗ ಜಿಲ್ಲೆಯಾದ್ಯಂತ ರಂಗಚಟುವಟಿಕೆಗಳಲ್ಲಿ ತೊಡಗಲು ಅವಕಾಶ ಒದಗಿಸಿತ್ತು. ಎಪ್ಪತ್ತರ ಇಳಿವಯಸ್ಸಲ್ಲೂ ರಂಗಭೂಮಿಯ ಹಿಮ್ಮೇಳ-ಮುಮ್ಮೇಳಗಾರರ (ಭಾಗವತರ) ಸಂಘವನ್ನು ಕಟ್ಟಿದ್ದಾರೆ. ಚಳ್ಳಕೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಘಟಕದ ಅಧ್ಯಕ್ಷರಾಗಿ ಎರಡು ಅವಧಿಗೆ (2005-2007, 2008-2010) ಸಾಹಿತ್ಯದ ಚಟುವಟಿಕೆಗಳನ್ನು ನಡೆಸಿದ್ದಾರೆ. ಜಿಲ್ಲಾ ಜಾನಪದ ಜಾತ್ರೆಯ ಸಂಚಾಲಕರಾಗಿಯೂ, ಕಾಲೇಜು ರಂಗೋತ್ಸವ (2016-2017) ಗಳಲ್ಲಿ ಯುವಜನರಲ್ಲಿ ರಂಗಭೂಮಿಯ ಆಸಕ್ತಿ ಮೂಡಿಸುವ ಕೆಲಸ ಮಾಡಿದ್ದಾರೆ. ಈ ರಂಗ ಚಟುವಟಿಕೆಗಳನ್ನು ಗುರುತಿಸಿ ಚಿತ್ರದುರ್ಗ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ (2015-16), ಯಾದಗಿರಿ ಜಿಲ್ಲೆಯಲ್ಲಿ ನಡೆದ ಜಾನಪದೋತ್ಸವದಲ್ಲಿ 'ಜಾನಪದ ಕಲಾಲೋಕ ಪ್ರಶಸ್ತಿ' (2017), ಸಿಜಿಕೆ ನಾಟಕೋತ್ಸವದಲ್ಲಿ 'ಸಿಜಿಕೆ ಪ್ರಶಸ್ತಿ' (2018) ಗಳ ಗೌರವ ಸಂದಿವೆ. 'ಮ್ಯಾಸ ಬೇಡರ ಮೌಖಿಕ ಕಥನಗಳು' ಕೃತಿಗೆ 2020 ನೇ ಸಾಲಿನ ಸಂಶೋಧನೆ ವಿಭಾಗದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪುಸ್ತಕ ಬಹುಮಾನ ದೊರೆತಿದೆ.

ಹೀಗೆ ರಂಗಭೂಮಿಗೆ ಮ್ಯಾಸ ಬೇಡರ ಕುಲಕಥನಗಳ ವೀರ, ವೀರ ನಾರಿಯರ ಕುರಿತು ನಾಟಕ ಬರೆಸುವ ಕಾರಣಕ್ಕೆ ಮ್ಯಾಸಬೇಡರ ಹಟ್ಟಿಗಳಲ್ಲಿ ವ್ಯಾಪಕ ಅಧ್ಯಯನ ಮಾಡುತ್ತಾರೆ. ಕಿಲಾರಿಗಳನ್ನು, ಕಟ್ಟೆಮನೆ ಮುಖ್ಯಸ್ಥರನ್ನೂ, ದೊರೆಗಳನ್ನೂ, ಪೂಜಾರಿಗಳನ್ನೂ, ಬೇಟಿಯಾಗಿ ಮಾಹಿತಿ ಸಂಗ್ರಹಿಸುತ್ತಾರೆ. ಹೀಗೆ ರಂಗಭೂಮಿಯ ದಾರಿ ಹಿಡಿದು ಪಿಟಿಎಸ್ ಸಂಶೋಧಕರಾಗಿ ಬದಲಾಗುತ್ತಾರೆ. ಇದರ ಫಲವಾಗಿ 'ಮ್ಯಾಸ ಬೇಡರ ಮೌಖಿಕ ಕಥನಗಳು' ಕೃತಿ ಪ್ರಕಟವಾಗುತ್ತದೆ. ಈ ಕೃತಿಯಲ್ಲಿ ಬಿಟ್ಟುಹೋದ ಮತ್ತಷ್ಟು ವಿಸ್ತಾರವಾದ ಮತ್ತೊಂದು ಸಂಶೋಧನೆ ಈಗ ಪ್ರಕಟಣೆಗೆ ಸಿದ್ದವಾಗಿದೆ. ಲಕ್ಷಗಟ್ಟಲೆ ಸಂಬಳ ಪಡೆಯುವ ವಿಶ್ವವಿದ್ಯಾಲಯಗಳ ಅಧ್ಯಾಪಕರು, ಪದವಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರುಗಳು ಜಡವಾಗಿರುವಾಗ, ವಿಶ್ವವಿದ್ಯಾಲಯಗಳಲ್ಲಿ ಸಂಶೋಧನೆಗಳು ಕಳಪೆಯಾಗುತ್ತಿರುವಾಗ ನೆಲಮೂಲದ ಸಂಶೋಧಕರಾಗಿ ಪೆದ್ದನಾಯಕ ತಿಪ್ಪೇಸ್ವಾಮಿ ಗಮನ ಸೆಳೆಯುತ್ತಾರೆ.

ಚಿತ್ರದುರ್ಗದಲ್ಲಿ ತಲೆ ಎತ್ತುತ್ತಿರುವ ಹಿಂದುತ್ವದ ಬಗ್ಗೆ ಕೇಳಿದರೆ, 'ಹಿಂದೆ ರಾಜರಲ್ಲಿ ಪ್ರಭಲರು ದುರ್ಬಲರು ಅಂತ ಎರಡೇ ವರ್ಗವಿದ್ದದ್ದು. ಹಿಂದೂ ಮುಸ್ಲಿಂ ಅಂತಲ್ಲ. ಪ್ರಭಲ ರಾಜರುಗಳು ದುರ್ಬಲ ರಾಜರುಗಳನ್ನು ಸೋಲಿಸಿ ವಶಪಡಿಸಿಕೊಂಡು ಸಂಪತ್ತನ್ನು ದೋಚುತ್ತಿದ್ದರಷ್ಟೆ. ಹಾಗಾಗಿ ಹೈದರಾಲಿ ಟಿಪ್ಪುವನ್ನು ಮುಸ್ಲಿಂ ದೊರೆಗಳನ್ನಾಗಿಯೂ, ಮದಕರಿ ನಾಯಕರ ವಂಶಸ್ಥರನ್ನು ಹಿಂದೂ ದೊರೆಗಳನ್ನಾಗಿ ನೋಡುವುದು ಈಗಿನ ರಾಜಕೀಯ ಲಾಭಕ್ಕಾಗಿ ಅಷ್ಟೆ. ಇದನ್ನು ನಾನು ಒಪ್ಪುವುದಿಲ್ಲ' ಎನ್ನುತ್ತಾರೆ. ಮ್ಯಾಸಬೇಡರ ಕುಲಕಥನಗಳ ಬಗ್ಗೆ, ಚಿತ್ರದುರ್ಗದ ಪಾಳೆಯಗಾರರ ಬಗ್ಗೆ ದಿನಗಟ್ಟಲೆ ಮಾತನಾಡುವ ಇವರ ಸಂಶೋಧನೆಯ ಎಲ್ಲವನ್ನು ಬರೆಯಿಸಿ ಕನ್ನಡ ವಿಶ್ವವಿದ್ಯಾಲಯ ಇವರಿಗೆ ಡಿಲಿಟ್ ಪದವಿ ಕೊಡಬಹುದಾಗಿದೆ. ಮುಂದೆ ರಾಜ್ಯಮಟ್ಟದ ವಾಲ್ಮೀಕಿ ಶ್ರೀ ಪ್ರಶಸ್ತಿಗೂ ಕರ್ನಾಟಕ ಸರಕಾರ ಪರಿಗಣಿಸಬೇಕಾಗಿದೆ.



■ ಲೇಖನ
ಅರುಣ್ ಜೋಳದಕೂಡ್ಲಿಗಿ

# ಸಿಎಂ ಬದಲಾವಣೆ ಕಾಂಗ್ರೆಸ್‌ಗೆ ಅನಿವಾರ್ಯ: ಕಾರಜೋಳ

» **ಚಿತ್ರದುರ್ಗ**

ರಾಜ್ಯದ ಮುಖ್ಯಮಂತ್ರಿಗಳನ್ನು ಬದಲಾವಣೆ ಮಾಡುವುದು ಕಾಂಗ್ರೆಸ್ ಪಕ್ಷಕ್ಕೆ ಅನಿವಾರ್ಯವಾಗಿದೆ, ಈಗ ಇರುವುದು ಕಾಂಗ್ರೆಸ್ ಬುಡುಬುಡಿಕೆ ಸರ್ಕಾರವಾಗಿದೆ, ಇದು ಹಗರಣಗಳ ಸರ್ಕಾರವಾಗಿದೆ. ಪ್ರತಿ ನಿತ್ಯ ಒಂದೊಂದು ಹಗರಣಗಳು ಇವೆ. ಹಗರಣಗಳಿಂದ ತಪ್ಪಿಸಿಕೊಳ್ಳುವ ಸಲುವಾಗಿ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಮುಖಂಡರು ಮುಖ್ಯಮಂತ್ರಿಗಳನ್ನು ಬದಲಾಯಿಸುವ ಅನಿವಾರ್ಯತೆ ಇದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಸಂಸದರಾದ ಗೋವಿಂದ ಕಾರಜೋಳ ತಿಳಿಸಿದರು.

ಚಿತ್ರದುರ್ಗ ನಗರದಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದ ಮುಖ್ಯಮಂತ್ರಿಗಳ ಬದಲಾವಣೆ ಇದು ಸೂರ್ಯ ಚಂದ್ರ ಹುಟ್ಟಿದಷ್ಟೇ ಸತ್ಯ, ವಾಲ್ಮೀಕಿ ಹಗರಣದಲ್ಲಿ ಭಾಗಿಯಾಗಿ ಜೈಲು ವಾಸವನ್ನು ಅನುಭವಿಸಿ ಈಗ ಬೇಲೆ ಮೇಲೆ ಹೊರಗೆ ಬಂದಿರುವ ನಾಗೇಂದ್ರರವರಿಗೆ ಹೆದರಿ ಅವರನ್ನು ಮತ್ತೇ ಸಚಿವ ಸಂಪುಟಕ್ಕೆ ತೆಗೆದುಕೊಳ್ಳುತ್ತಿದ್ದಾರೆ ವಾಲ್ಮೀಕಿ ನಿಗಮದ ಹಣ ಲೋಕಸಭೆಯ ಚುನಾವಣೆಯಲ್ಲಿ ಬಳಕೆಯಾಗಿದೆ ಎಂದು ವರದಿಯಲ್ಲಿ ಬಂದಿದೆ ಇದಕ್ಕೆ ಹೆದರಿ ಕಾಂಗ್ರೇಸ್ ನಾಯಕರು ಅವರನ್ನು ವಾಪಾಸ್ ಸಚಿವ ಸಂಪುಟಕ್ಕೆ ತೆಗೆದುಕೊಳ್ಳುತ್ತಿದ್ದಾರೆ ಎಂದರು. ಆನಂತ್ ಕುಮಾರ್ ಹೆಗಡೆಯವರು ಒಂದು ಭಾಷಣದಲ್ಲಿ ಏನೋ ಮಾತನಾಡಿದ್ದರು ಅದನ್ನು ಕಾಂಗ್ರೆಸ್‌ನವರು ಅದನ್ನು ಹಿಡಿದುಕೊಂಡು ದುರುಪಯೋಗ ಮಾಡಿಕೊಂಡು ದೇಶದ ತುಂಬಾ ಹರಡಿದ್ದಾರೆ ಸಂಘ ಪರಿವಾರದವರು



ಬಿಜೆಪಿಯವರು ಸಂವಿಧಾನವನ್ನು ಬದಲು ಮಾಡುತ್ತಾರೆ ಎಂದು ಗುಲ್ಲು ಎಬ್ಬಿಸಿ ಚುನಾವಣೆಯಲ್ಲಿ ಎಸ್.ಸಿ.ಎಸ್.ಟಿ. ಓಬಿಸಿ ಯವರ ಮತವನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಇದರಿಂದ ಎಚ್ಚೆತ್ತುಕೊಂಡ ಸಂಘ ಪರಿವಾರ ಮತ್ತು ಬಿಜೆಪಿ ಅವರನ್ನು ಬದಲಾವಣೆ ಮಾಡಿದೆ. ಯಡೆಯೂರಪ್ಪರವರ 12 ಕೋಟಿ ಲಂಚವನ್ನು ಪಡೆದ ವಿಷಯಕ್ಕೆ ಸಂಬಂಧಿಸಿದಂತೆ ಇದರ ಬಗ್ಗೆ ಈಗಾಗಲೇ ತನಿಖೆಯಾಗಿರುವ ವಿಷಯವನ್ನು ಹಿಡಿದುಕೊಂಡು ಕಾಂಗ್ರೆಸ್ ಅದನ್ನು ತೆರೆಯುವ ಕಾರ್ಯವನ್ನು ಮಾಡುತ್ತಿದೆ, ಇದರ ಬಗ್ಗೆ ಪ್ರಾಸಿಕ್ಯೂಷನ್‌ಗೆ ಕಳುಹಿಸಿ ದಾಗ ಹಿಂದಿನ ರಾಜ್ಯಪಾಲರು ಇದನ್ನು ತಿರಸ್ಕಾರ ಮಾಡಿದ್ದಾರೆ. ಇದನ್ನು ಮತ್ತೇ ಓಪನ್ ಮಾಡುವುದು ಎಂದರೆ ದ್ವೇಷದ ರಾಜಕಾರಣವಾಗಿದೆ. ಕಾಂಗ್ರೆಸ್‌ನವರು ದ್ವೇಷವನ್ನು ಸಾಧಿಸುತ್ತಿದ್ದಾರೆ. ಕಾಂಗ್ರೆಸ್ ಹಲವಾರು ಹಗರಣದಲ್ಲಿ ಸಿಲುಕಿ ಈಗ ಬೇರೆಯವರ ಕಡೆಗೆ ಬೊಟ್ಟು ಮಾಡುತ್ತಿರುವ ಕೆಲಸವನ್ನು ಮಾಡುತ್ತಿದೆ ಇದು ದುರುದ್ದೇಶದಿಂದ ಮಾಡುವ ಆರೋಪವಾಗಿದೆ. ಭದ್ರಾವ ಮೇಲ್ದಂಡೆ ಯೋಜನೆಗೆ 5300 ಕೋಟಿ ಕೊಡಿ ಎಂದು ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿಗಳು ಪತ್ರವನ್ನು ಬರೆಯುವುದರಲ್ಲಿ ತಪ್ಪಿಲ್ಲ, ಅದರೆ ಕಾಮಗಾರಿಯನ್ನುಬಂದ್‌ಮಾಡಿಹಣವನ್ನು ಕೇಳುವುದು ಸರಿಯಲ್ಲ 2008-09ನೇ ಸಾಲಿನಲ್ಲಿ ಯೋಜನೆ ಪ್ರಾರಂಭವಾಗಿದೆ. ಅಂದಿನಿಂದ ಇವತ್ತಿನವರೆಗೂ ಕಾಂಗ್ರೆಸ್ ಸರ್ಕಾರ ಇದ್ದಾಗ ಭದ್ರಾ ಮೇಲ್ದಂಡೆಗಾಗಲೀ ಕೃಷ್ಣ ಯೋಜನೆಗಾಗಲೀ ಹಣವನ್ನು ನೀಡುತ್ತಿರಲಿಲ್ಲ, ಕಾಂಗ್ರೆಸ್ ಸರ್ಕಾರದಲ್ಲಿ ನೀರಾವರಿ ಯೋಜನೆಗಳಿಗೆ ಆದತ್ಯೆಯನ್ನು ನೀಡಲಿಲ್ಲ, ನಮ್ಮ ಸರ್ಕಾರದಲ್ಲಿ ನಾನು ಮಂತ್ರಿಯಾಗಿದ್ದಾಗ 5700 ಕೋಟಿ ರೂ. ಗಳನ್ನು ನೀಡುವುದರ ಮೂಲಕ ಕಾಮಗಾರಿ ವೇಗವಾಗಿ ಮಾಡುವಂತೆ ಮಾಡಲಾಗಿತ್ತು. ಈಗ ಸರ್ಕಾರ ಬಂದು ಒಂದುವರೆ ವರ್ಷದಲ್ಲಿ ಗುತ್ತಿಗೆದಾರರ ಹಣವನ್ನು ಪಾವತಿ ಮಾಡದೇ ಗುತ್ತಿಗೆದಾರರ ಕೆಲಸವನ್ನು ಬಂದ್ ಮಾಡಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T